# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಯಾರಿಗಾದರು ನಿನ್ನಿಂದ ಯಾವುದೇ ಸಹಾಯದ ಅಗತ್ಯವಿದೆಯೋ ಅದನ್ನು ಬಹಳ ಪ್ರೀತಿಯಿಂದ ಮಾಡು. ಆದರೆ ಆ ಸಹಾಯದಿಂದ ನೀನು ಏನನ್ನೂ ಕೂಡ ನಿರೀಕ್ಷಿಸಬೇಡ. ನೀನು ಮಾಡಿದ ಆ ಸಹಾಯ ಯಾವುದೇ ಕಾರಣಕ್ಕೂ ವ್ಯರ್ಥ ಆಗಲಾರದು. ನೀನು ತೊಂದರೆಯಲ್ಲಿದ್ದಾಗ ಅದು ಒಂದಲ್ಲ ಒಂದು ರೂಪದಲ್ಲಿ ಬಂದು ನೆರವಾಗುತ್ತದೆ

**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 17-07-2026 to 23-07-2026 ಬೆಲೆ:10-00 ಸಂಪುಟ–1 ಸಂಚಿಕೆ–42 ಪುಟಗಳು–6






ಕ್ಷಣ ಕ್ಷಣದ ಸುದ್ದಿಗಳಿಗಾಗಿ

ಕರಾವಳಿ ತರಂಗಿಣಿ

ಪತ್ರಿಕಾ ಬಳಗದಿಂದ

ಅಂತರ್ಜಾಲ ಮಾಧ್ಯಮ

www.karavalitharangini.com

ಕರಾವಳಿ ತರಂಗಿಣಿ

ಮಂಗಳೂರು




ಮಂಗಳೂರಿನ ಕದ್ರಿ ಪಾರ್ಕ್ ನಲ್ಲಿರುವ ಹುತಾತ್ಮರ ಸ್ಮಾರಕದ ಬಳಿ ಭಾರತೀಯ ಸೇನೆಯ ಹೆಮ್ಮೆಯ ಟಿ–55 ಯುದ್ಧ ಟ್ಯಾಂಕ್ ಅನ್ನು ಅಳವಡಿಸಲಾಗಿದೆ. ಪುಣೆಯ ಕಿರ್ಕೀ ಡಿಫೆನ್ಸ್ ಡಿಪೋದಿಂದ ತರಲಾದ ಈ ಐತಿಹಾಸಿಕ ಟ್ಯಾಂಕ್, ದೇಶಕ್ಕಾಗಿ ಹೋರಾಡಿದ ಸೈನಿಕರ ತ್ಯಾಗ–ಬಲಿದಾನದ ಸಂಕೇತವಾಗಿದೆ. ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರ ಪ್ರಯತ್ನದ ಫಲವಾಗಿ, ಸುಮಾರು 38 ಲಕ್ಷ ರೂ. ವೆಚ್ಚದಲ್ಲಿ ವೇದಿಕೆ ನಿರ್ಮಿಸಿ ಟ್ಯಾಂಕ್ ಅನ್ನು ನವೀಕರಿಸಲಾಗಿದೆ. ಯುವಜನತೆಯಲ್ಲಿ ದೇಶಭಕ್ತಿ ಮತ್ತು ಸ್ಫೂರ್ತಿಯನ್ನು ಜಾಗೃತಗೊಳಿಸುವ ಉದ್ದೇಶದಿಂದ ಇದನ್ನು ಯುದ್ಧ ಸ್ಮಾರಕವಾಗಿ ಪ್ರದರ್ಶಿಸಲಾಗುತ್ತಿದೆ. ಕಾರ್ಗಿಲ್ ವಿಜಯ್ ದಿವಸ್‌ನ ಅಂಗವಾಗಿ ಜುಲೈ 26ರಂದು ಸಾರ್ವಜನಿಕರ ವೀಕ್ಷಣೆಗೆ ಅನಾವರಣಗೊಳ್ಳಲಿರುವ ಈ ಟ್ಯಾಂಕ್, ಮಂಗಳೂರಿನ ಸೈನಿಕ ಇತಿಹಾಸದ ಹೊಸ ಹೆಗ್ಗುರುತಾಗಿ ನಿಲ್ಲಲಿದೆ.

## ನನ್ನನ್ನು ಜೈಲಿಗೆ ಕಳುಹಿಸುವ ಎಚ್‌ಡಿಕೆ ಪ್ರಯತ್ನ ಮುಂದುವರಿಯಲಿ –ಡಿಕೆಶಿ



**ಬೆಂಗಳೂರು:** ನನ್ನನ್ನು ಜೈಲಿಗೆ ಕಳುಹಿಸುವ ಪ್ರಯತ್ನವನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಯವರು ಮುಂದುವರಿಸಲಿ, ಅದಕ್ಕೆ ತಾನು ಸಿದ್ಧನಿದ್ದೇನೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವ ಕುಮಾರ್ ಅವರು ಸವಾಲು ಹಾಕಿದ್ದಾರೆ. ಬುಧವಾರ ವಿಧಾನಸೌಧದಲ್ಲಿ ಸುದ್ದಿ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಬೇರೆ ಯಾವ ನಾಯಕರು ಬೆಳೆಯಬಾರದು ಎಂಬ ಮನಸ್ಥಿತಿ ಎಚ್.ಡಿ. ಕುಮಾರಸ್ವಾಮಿ ಅವರದ್ದು ಎಂಬುದು ನನಗೆ ಅರಿವಿದೆ. ನಿಮಗೆ ಆಸೆ ಇದ್ದರೆ ನಿಮ್ಮ ಪ್ರಯೋಗಗಳನ್ನು ನನ್ನ ಮೇಲೆ ಆಗಲಿ. ಈಗಾಗಲೇ ನನ್ನ ಮೇಲೆ ಪ್ರಕರಣಗಳನ್ನು ದಾಖಲಿಸುವ ಪ್ರಯೋಗಗಳು **3ನೇ ಪುಟಕ್ಕೆ**

## ದಕ್ಷಿಣ ಭಾರತದತ್ತ ನುಸುಳುತ್ತಿದೆಯೇ ಅಕ್ರಮ ಬಾಂಗ್ಲಾ ವಲಸಿಗರ ಪಡೆ..?



**ಮಂಗಳೂರು:** ದಕ್ಷಿಣ ಭಾರತದ ರಾಜ್ಯಗಳು, ಅದರಲ್ಲೂ ವಿಶೇಷವಾಗಿ ಕರ್ನಾಟಕವು ಅಕ್ರಮ ವಲಸಿಗರ ಪಾಲಿಗೆ ಸುರಕ್ಷಿತ ತಾಣವಾಗಿ ಬದಲಾಗುತ್ತಿದೆಯೇ ಎಂಬ ಗಂಭೀರ ಪ್ರಶ್ನೆ ಇದೀಗ ಎದುರಾಗಿದೆ. ಇತ್ತೀಚಿನ ದಿನಗಳಲ್ಲಿ ಮಂಗಳೂರು, ಬೆಂಗಳೂರು ಮತ್ತು ಹಾಸನದಂತಹ ನಗರಗಳಲ್ಲಿ ಬೆಳಕಿಗೆ ಬಂದಿರುವ ಅಕ್ರಮ ಬಾಂಗ್ಲಾದೇಶಿ ಪ್ರಜೆಗಳ ಬಂಧನ ಪ್ರಕರಣಗಳು, ರಾಷ್ಟ್ರೀಯ ಭದ್ರತೆಗೆ ಒಡ್ಡಿರುವ ಸವಾಲನ್ನು ತೆರೆದಿಟ್ಟಿವೆ. ಬಾಂಗ್ಲಾದೇಶದ ಗಡಿಯಿಂದ ಭಾರತದೊಳಕ್ಕೆ ನುಸುಳುವ ಈ ವಲಸಿಗರು, ದಲ್ಲಾಳಿಗಳ ಸಹಾಯದಿಂದ ಅತ್ಯಂತ ವ್ಯವಸ್ಥಿತವಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಳ್ಳುತ್ತಿದ್ದಾರೆ. ಪಶ್ಚಿಮ ಬಂಗಾಳದ ಮೂಲಕ **3ನೇ ಪುಟಕ್ಕೆ**


## ಮೈಸೂರು ದಸರಾದಲ್ಲಿ ಕಂಬಳ: ರಾಜಕೀಯ ಹಗ್ಗಜಗ್ಗಾಟ..



**ಮಂಗಳೂರು:** ಮೈಸೂರು ದಸರಾದಲ್ಲಿ ಕರಾವಳಿಯ ಸಾಂಪ್ರದಾಯಿಕ ಕ್ರೀಡೆಯಾದ ಕಂಬಳವನ್ನು ಆಯೋಜಿಸುವ ಸರ್ಕಾರದ ಪ್ರಸ್ತಾವನೆಯು ರಾಜ್ಯದಲ್ಲಿ ತೀವ್ರ ರಾಜಕೀಯ ಆಯಾಮವನ್ನು ಪಡೆದುಕೊಂಡಿದೆ. ಕರಾವಳಿಯ ನಾಯಕರು ಮತ್ತು ಸ್ಥಳೀಯ ಜನಪ್ರತಿನಿಧಿಗಳು ಈ ನಿರ್ಧಾರವನ್ನು ರಾಜಕೀಯ ದೃಷ್ಟಿಕೋನದಿಂದಲೇ ಪ್ರಶ್ನಿಸುತ್ತಿದ್ದಾರೆ. ಕಾರ್ಕಳದ ಶಾಸಕ ವಿ. ಸುನಿಲ್ ಕುಮಾರ್ ಅವರು ಈ ವಿಷಯದಲ್ಲಿ ಸರ್ಕಾರ ಹಠಮಾರಿತನ ತೋರುತ್ತಿದೆ ಎಂದು ಆರೋಪಿಸಿದ್ದು, ಇನ್ನೊಂದೆಡೆ **3ನೇ ಪುಟಕ್ಕೆ**







# ದಕ್ಷಿಣ ಭಾರತದತ್ತ ನುಸುಳುತ್ತಿದೆಯೇ ಅಕ್ರಮ ಬಾಂಗ್ಲಾ ವಲಸಿಗರ ಪಡೆ..?

ಒಂದನೇ ಪುಟದಿಂದ......

ಪ್ರವೇಶ ಪಡೆದ ನಂತರ, ನಕಲಿ ಆಧಾರ್ ಕಾರ್ಡ್‌ಗಳು ಮತ್ತು ಮತದಾರರ ಗುರುತಿನ ಚೀಟಿಗಳನ್ನು ಪಡೆದು ಇವರು ದೇಶದ ವಿವಿಧ ಭಾಗಗಳಿಗೆ ಹರಡಿಕೊಳ್ಳುತ್ತಿದ್ದಾರೆ. ವಿಶೇಷವಾಗಿ ನಿರ್ಮಾಣ ವಲಯ, ಹೋಟೆಲ್ ಉದ್ಯಮ ಮತ್ತು ಅಸಂಘಟಿತ ವಲಯದ ಕಾರ್ಮಿಕರ ಸೋಗಿನಲ್ಲಿ ಇವರು ಸ್ಥಳೀಯ ಜನಸಂಖ್ಯೆಯಲ್ಲಿ ಬೆರೆತುಕೊಳ್ಳುತ್ತಿರುವುದು ಭದ್ರತಾ ದಳಗಳಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ಇತ್ತೀಚೆಗೆ ಮಂಗಳೂರಿನ ನಿರ್ಮಾಣ ಹಂತದ ಕಟ್ಟಡಗಳಲ್ಲಿ ಕೆಲಸ ಮಾಡುತ್ತಿದ್ದ ವಲಸಿಗರನ್ನು ಪತ್ತೆ ಹಚ್ಚಿದ ಪೊಲೀಸರು, ಅವರು ಹೊಂದಿದ್ದ ನಕಲಿ ದಾಖಲೆಗಳನ್ನು ನೋಡಿ ದಂಗಾಗಿದ್ದಾರೆ. ಇನ್ನು ಹಾಸನದಲ್ಲಿನ ಪ್ರಕರಣವಂತೂ ವ್ಯವಸ್ಥೆಯೊಳಗಿನ ಭ್ರಷ್ಟಾಚಾರವನ್ನು ಬಯಲು ಮಾಡಿದೆ. ಈ ಅಕ್ರಮ ವಲಸೆಯು ಕೇವಲ ಕಾನೂನು ಉಲ್ಲಂಘನೆಯ ವಿಷಯವಲ್ಲ, ಇದು ಆಂತರಿಕ ಭದ್ರತೆಯ ದೃಷ್ಟಿಯಿಂದ ಅತ್ಯಂತ ಸೂಕ್ಷ್ಮ ಸಂಗತಿಯಾಗಿದೆ. ಗುರುತೇ ಇಲ್ಲದ ವ್ಯಕ್ತಿಗಳು ನಕಲಿ ದಾಖಲೆಗಳೊಂದಿಗೆ ಸಮಾಜದ ಮುಖ್ಯ ವಾಹಿನಿಯಲ್ಲಿ ಬೆರೆತಿರುವುದು ಅಪರಾಧ ಕೃತ್ಯಗಳಿಗೆ ಎಡೆಮಾಡಿಕೊಡಬಲ್ಲದು. ಈ ಹಿನ್ನೆಲೆಯಲ್ಲಿ, ಇದೀಗ ಸ್ಥಳೀಯಾಡಳಿತಗಳು ಮತ್ತು ಕಟ್ಟಡ ನಿರ್ಮಾಣ ಸಂಸ್ಥೆಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ರವಾನಿಸಲಾಗಿದೆ. ಕೆಲಸಕ್ಕೆ ತೆಗೆದುಕೊಳ್ಳುವ ಪ್ರತಿಯೊಬ್ಬ ಕಾರ್ಮಿಕನ ಮೂಲ ದಾಖಲೆಗಳ ಪರಿಶೀಲನೆ, ಮನೆ ಮಾಲೀಕರು ಬಾಡಿಗೆ ನೀಡುವ ಮುನ್ನ ನಡೆಸಬೇಕಾದ ಪೊಲೀಸ್ ಪರಿಶೀಲನೆ ಮತ್ತು ಪಡಿತರ ಚೀಟಿ ಹಾಗೂ ಆಧಾರ್‌ನಂತಹ ದಾಖಲೆಗಳ ಮರು ಪರಿಶೀಲನೆಯನ್ನು ಅಧಿಕಾರಿಗಳು ಚುರುಕುಗೊಳಿಸಿದ್ದಾರೆ. ಅಕ್ರಮವಾಗಿ ದೇಶ ಪ್ರವೇಶಿಸುವವರನ್ನು ತಡೆಯುವ ಗಡಿ ಭದ್ರತೆಯ ಹೊಣೆಗಾರಿಕೆಯ ಜೊತೆಗೆ, ಒಳಗಿನಿಂದಲೇ ವ್ಯವಸ್ಥೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವ ಜಾಲವನ್ನು ಬೇರು ಸಹಿತ ಕಿತ್ತೊಗೆಯಬೇಕಾದ ತುರ್ತು ಅಗತ್ಯವಿದೆ. ಸಮಾಜದ ಶಾಂತಿ ಮತ್ತು ರಾಷ್ಟ್ರದ ಹಿತದೃಷ್ಟಿಯಿಂದ ಪ್ರತಿಯೊಬ್ಬ ನಾಗರಿಕರೂ ಇಂತಹ ಅನುಮಾನಾಸ್ಪದ ಚಟುವಟಿಕೆಗಳ ಬಗ್ಗೆ ಜಾಗರೂಕರಾಗಿರಬೇಕಾದ ಸಮಯ ಬಂದಿದೆ.

# ಅಕ್ರಮ ಬಾಂಗ್ಲಾ ವಲಸಿಗರ ಪತ್ತೆಗೆ ವಿಶೇಷ ಟಾಸ್ಕ್ ಫೋರ್ಸ್ ರಚನೆಗೆ ಆಗ್ರಹ



ಮಂಗಳೂರು : ಸುರತ್ಕಲ್ ಸಮೀಪದ ಮುಕ್ಕದಲ್ಲಿ ಎಂಟು ಮಂದಿ ಹಾಗೂ ಕೊಡಿಕಲ್ ಪ್ರದೇಶದಲ್ಲಿ ಹನ್ನೊಂದು ಮಂದಿ ಅಕ್ರಮ ಬಾಂಗ್ಲಾದೇಶಿ ವಲಸಿಗರನ್ನು ಯಶಸ್ವಿಯಾಗಿ ಪತ್ತೆಹಚ್ಚಿ ವಶಕ್ಕೆ ಪಡೆದಿರುವ ಮಂಗಳೂರು ನಗರ ಪೊಲೀಸ್ ಇಲಾಖೆಯ ಕಾರ್ಯಾಚರಣೆಗೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಶ್ಲಾಘನೆ ವ್ಯಕ್ತವಾಗಿದೆ. ಈ ಯಶಸ್ವಿ ಕಾರ್ಯಾಚರಣೆಗಾಗಿ ಮಂಗಳೂರು ನಗರ ಪೊಲೀಸ್ ಆಯುಕ್ತರಾದ ಶ್ರೀ ಸುಧೀರ್ ಕುಮಾರ್ ರೆಡ್ಡಿ ಹಾಗೂ ಅವರ ತಂಡಕ್ಕೆ ಬಿಜೆಪಿ ಯುವಮೋರ್ಚಾ ದಕ್ಷಿಣ ಕನ್ನಡ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭರತ್ ರಾಜ್ ಕೃಷ್ಣಾಪುರ ಅವರು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ರಾಷ್ಟ್ರೀಯ ಭದ್ರತೆಯ ದೃಷ್ಟಿಯಿಂದ ಅಕ್ರಮ ವಲಸೆಯನ್ನು ತಡೆಗಟ್ಟುವುದು ಅತ್ಯಂತ ಪ್ರಮುಖ ಆದ್ಯತೆಯಾಗಬೇಕಿದೆ. ನಗರದ ಕಟ್ಟಡ ನಿರ್ಮಾಣ ಕ್ಷೇತ್ರ, ವಿವಿಧ ಕಾರ್ಮಿಕ ವಲಯಗಳು ಸೇರಿದಂತೆ ಹಲವು ಆಯಕಟ್ಟಿನ ಸ್ಥಳಗಳಲ್ಲಿ ಇನ್ನೂ ಅನೇಕ ಅಕ್ರಮ ವಲಸಿಗರು ನೆಲೆಸಿರುವ ಬಗ್ಗೆ ಸಾರ್ವಜನಿಕ ವಲಯದಿಂದ ಮಾಹಿತಿ ಕೇಳಿಬರುತ್ತಿದೆ. ಈ ನಿಟ್ಟಿನಲ್ಲಿ ಅಕ್ರಮ ಬಾಂಗ್ಲಾ ವಲಸಿಗರ ಪತ್ತೆಗೆ ವಿಶೇಷ ಟಾಸ್ಕ್ ಫೋರ್ಸ್ ರಚನೆಗೆ ಆಗ್ರಹಿಸಿದ್ದಾರೆ.

# 'ನೋ ಡೆವಲಪ್‌ಮೆಂಟ್ ಜೋನ್' ಕುರಿತಾಗಿ ಆಪ್ ಆಕ್ರೋಶ



ಬೆಂಗಳೂರು: ಕರಾವಳಿ ಪ್ರದೇಶಗಳ ಸಂರಕ್ಷಣೆಗೆ ಸಂಬಂಧಿಸಿದಂತೆ "ನೋ ಡೆವಲಪ್‌ಮೆಂಟ್ ಜೋನ್" ಘೋಷಣೆ ಮಾಡುವ ಮೂಲಕ ಜನಜೀವನ ಮತ್ತು ಸ್ಥಳೀಯ ಅಭಿವೃದ್ಧಿಗೆ ಅಡ್ಡಿಯಾಗುತ್ತಿದೆ ಎಂದು ಆಮ್ ಆದ್ಮಿ ಪಕ್ಷ ಆರೋಪಿಸಿದೆ. ಪರಿಸರ ಸಂರಕ್ಷಣೆ ಹೆಸರಿನಲ್ಲಿ ಕರಾವಳಿಯ ಜನರ ಹಕ್ಕುಗಳನ್ನು ಕುಗ್ಗಿಸಲಾಗುತ್ತಿದೆ ಎಂದು ಪಕ್ಷದ ಪ್ರಕಟಣೆಯಲ್ಲಿ ಹೇಳಲಾಗಿದೆ. ಕರ್ನಾಟಕದಲ್ಲಿ ಇತ್ತೀಚಿನ ದಿನಗಳಲ್ಲಿ ಕರಾವಳಿ ಪ್ರದೇಶಗಳಿಗೆ ಸಂಬಂಧಿಸಿದ ನೀತಿಗಳು ಜನರಿಗೆ ಅನ್ಯಾಯವಾಗುವ ರೀತಿಯಲ್ಲಿ ಜಾರಿಗೆ ಬರುತ್ತಿವೆ. ವಿಶೇಷವಾಗಿ, ಸ್ಥಳೀಯ ನಿವಾಸಿಗಳು, ಮೀನುಗಾರರು ಮತ್ತು ಸಣ್ಣ ವ್ಯಾಪಾರಿಗಳ ಜೀವನೋಪಾಯಕ್ಕೆ ಧಕ್ಕೆ ಉಂಟಾಗುತ್ತಿದೆ. ಅಭಿವೃದ್ಧಿ ಹೆಸರಿನಲ್ಲಿ ಕೆಲವು ಯೋಜನೆಗಳಿಗೆ ಮುಂದುವರಿಯುತ್ತಿದ್ದರೆ, ಇನ್ನೊಂದೆಡೆ ಸಾಮಾನ್ಯ ಜನರ ಮೂಲಭೂತ ಹಕ್ಕುಗಳಿಗೆ ನಿರ್ಬಂಧ ಹೇರುತ್ತಿರುವುದು ವಿರೋಧಾಭಾಸವಾಗಿದೆ ಎಂದು ಆಪ್ ಅಭಿಪ್ರಾಯಪಟ್ಟಿದೆ.

# ಮೈಸೂರು ದಸರಾದಲ್ಲಿ ಕಂಬಳ: ರಾಜಕೀಯ ಹಗ್ಗಜಗ್ಗಾಟ..

ಒಂದನೇ ಪುಟದಿಂದ......

ಕರಾವಳಿಯ ಕಂಬಳ ಆಯೋಜಕರು ಮತ್ತು ಕೋಣಗಳ ಮಾಲೀಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಸರ್ಕಾರ ಏಕಾಏಕಿ ನಿರ್ಧಾರ ಕೈಗೊಂಡಿರುವುದು ಅಸಮಾಧಾನಕ್ಕೆ ಕಾರಣವಾಗಿದೆ. ಈ ಯೋಜನೆಯನ್ನು ಸಾಂಸ್ಕೃತಿಕ ವಿನಿಮಯ ಎಂದು ಸರ್ಕಾರ ಸಮರ್ಥಿಸಿಕೊಳ್ಳಲು ಯತ್ನಿಸುತ್ತಿದ್ದರೂ, ರಾಜಕೀಯವಾಗಿ ಇದನ್ನು ಕರಾವಳಿಯ ಅಸ್ಮಿತೆಯನ್ನು ಮೈಸೂರಿನಲ್ಲಿ ಪ್ರದರ್ಶಿಸುವ ಅಥವಾ ಪ್ರವಾಸೋದ್ಯಮದ ಹೆಸರಿನಲ್ಲಿ ರಾಜಕೀಯ ಲಾಭ ಪಡೆಯುವತಂತ್ರ ಎಂದು ವಿರೋಧ ಪಕ್ಷಗಳು ವ್ಯಾಖ್ಯಾನಿಸುತ್ತಿವೆ. ವಿಶೇಷವಾಗಿ, ಉಡುಪಿ ಮತ್ತುದಕ್ಷಿಣಕನ್ನಡ ಜಿಲ್ಲೆಗಳಲ್ಲಿ ನಡೆಯುವ ಕಂಬಳಗಳಿಗೆ ಸರ್ಕಾರ ನೀಡುವ ಅನುದಾನ ಅತ್ಯಲ್ಪವಾಗಿರುವಾಗ, ದಸರಾದಲ್ಲಿ ಕಂಬಳ ನಡೆಸಲು ಸುಮಾರು 8 ಕೋಟಿ ರೂ. ವೆಚ್ಚ ಮಾಡುವ ಸರ್ಕಾರದ ಚಿಂತನೆಯನ್ನು ವಿರೋಧ ಪಕ್ಷದ ನಾಯಕರು ರಾಜಕೀಯವಾಗಿ ಟೀಕಿಸುತ್ತಿದ್ದಾರೆ. ಜಿಲ್ಲಾ ಮಟ್ಟದ ಕಂಬಳಗಳಿಗೆ ತಲಾ 25 ಲಕ್ಷರೂ. ನೀಡಬೇಕೆಂಬ ಬೇಡಿಕೆಯನ್ನು ನಿರ್ಲಕ್ಷಿಸಿ, ದೊಡ್ಡ ಮೊತ್ತವನ್ನು ದಸರಾ ಕಂಬಳಕ್ಕೆ ಮೀಸಲಿಡಲು ಹೊರಟಿರುವುದು ಸರ್ಕಾರದ ಗಣನೆಯನ್ನು ಪ್ರಶ್ನಿಸುವಂತಾಗಿದೆ.ಈ ರಾಜಕೀಯ ಜಟಾಪಟಿಯಲ್ಲಿ, ಕಂಬಳದಂತಹ ಜಾನಪದ ಕ್ರೀಡೆಯು ರಾಜಕೀಯ ದಾಳವಾಗಿ ಬಳಕೆಯಾಗುತ್ತಿದೆಯೇ ಎಂಬ ಅನುಮಾನ ಮೂಡಿದೆ. ಮೈಸೂರಿನ ದಸರಾಕ್ಕೆ ಕಂಬಳದ ರಫ್ತು ಕೇವಲ ಸಾಂಸ್ಕೃತಿಕ ಪ್ರದರ್ಶನವೋ ಅಥವಾ ರಾಜಕೀಯವಾಗಿ ಕರಾವಳಿಯ ಮತದಾರರ ಅಥವಾ ಪ್ರಭಾವಿಗಳನ್ನು ಸೆಳೆಯುವ ಪ್ರಯತ್ನವೋ ಎಂಬ ಚರ್ಚೆಗಳು ಈಗ ಸಾರ್ವಜನಿಕ ವಲಯದಲ್ಲಿ ಬಲವಾಗಿ ಕೇಳಿಬರುತ್ತಿವೆ. ಒಟ್ಟಾರೆಯಾಗಿ, ಸರ್ಕಾರವು ಸಾಂಸ್ಕೃತಿಕ ಸಂರಕ್ಷಣೆಯ ಹೆಸರಿನಲ್ಲಿರಾಜಕೀಯ ಹಿತಾಸಕ್ತಿಗಳಿಗಿಂತ ಕ್ರೀಡೆಯ ಮೂಲ ಆಶಯಗಳಿಗೆ ಮತ್ತು ಸ್ಥಳೀಯ ಭಾಗಿದಾರಿಕೆಗೆ ಹೆಚ್ಚಿನ ಆದ್ಯತೆ ನೀಡಬೇಕೆಂಬ ಒತ್ತಾಯ ಕೇಳಿಬರುತ್ತಿದೆ.

# ಸಿಎ ಪರೀಕ್ಷೆ : ವಿವೇಕಾನಂದ ಕಾಲೇಜು ವಿದ್ಯಾರ್ಥಿನಿ ಸಾಧನೆ



ಪುತ್ತೂರು : 'ಇನ್ಸಿಟ್ಯೂಟ್ ಆಫ್ ಚಾರ್ಟಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ (ಐಸಿಎಐ) ಇತ್ತೀಚೆಗೆ ನಡೆಸಿದ ಸಿಎ ಫೌಂಡೇಶನ್ ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು, ಪುತ್ತೂರಿನ ವಿವೇಕಾನಂದ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಗಮನಾರ್ಹ ಸಾಧನೆ ಮಾಡಿದ್ದಾರೆ. ಕಾಲೇಜಿನ 2025–26ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿನಿಯಾದ ಸಹನ ಮಳಿ ಅವರು ಅತ್ಯುತ್ತಮ ಅಂಕಗಳನ್ನು ಗಳಿಸುವ ಮೂಲಕ ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದಾರೆ. ಉತ್ತೀರ್ಣರಾಗಿರುವ ಸಹನ ಮಳಿ ಅವರು ಪುತ್ತೂರು ತಾಲೂಕಿನ ಮಡೂರಿನ ನಿವಾಸಿಗಳಾದ ವೆಂಕಟಕೃಷ್ಣ ಎಮ್.ಎನ್ ಹಾಗೂ ವೀಣಾ ಸರಸ್ವತಿ ದಂಪತಿಗಳ ಪುತ್ರಿಯಾಗಿದ್ದಾರೆ. ಕಠಿಣ ಶ್ರಮದ ಮೂಲಕ ಸಿಎ ಫೌಂಡೇಶನ್ ಪರೀಕ್ಷೆಯಲ್ಲಿ ಯಶಸ್ಸು ಗಳಿಸಿ ಕಾಲೇಜಿಗೆ ಕೀರ್ತಿ ತಂದಿರುವ ವಿದ್ಯಾರ್ಥಿನಿಯನ್ನು ವಿವೇಕಾನಂದ ಪದವಿಪೂರ್ವ ಕಾಲೇಜಿನ ಆಡಳಿತಮಂಡಳಿ, ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ಉಪನ್ಯಾಸಕೇತರ ವೃಂದದವರು ಪ್ರೀತಿಪೂರ್ವಕವಾಗಿ ಅಭಿನಂದಿಸಿ, ಮುಂದಿನ ಭವಿಷ್ಯಕ್ಕೆ ಶುಭವನ್ನು ಹಾರೈಸಿದ್ದಾರೆ.

# ಆಳ್ವಾಸ್ ವಿದ್ಯಾರ್ಥಿಗಳಿಂದ ಎಸಿಸಿಎ ಪರೀಕ್ಷೆಯಲ್ಲಿ ಸಾಧನೆ

ALVA'S Education Foundation®

ಮೂಡುಬಿದಿರೆ: ಇಲ್ಲಿನ ಆಳ್ವಾಸ್ ಕಾಲೇಜು (ಸ್ವಾಯತ್ತ) ವಿದ್ಯಾರ್ಥಿಗಳು ಜಾಗತಿಕ ಮಟ್ಟದ ಪ್ರತಿಷ್ಠಿತ ಎಸಿಸಿಎ ಜೂನ್ 2026ರ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಸ್ಕಿಲ್ಸ್ ಲೆವೆಲ್‌ನ ಫಿನಾನ್ಶಿಯಲ್ ರಿಪೋರ್ಟಿಂಗ್ ವಿಷಯದಲ್ಲಿ ಒಟ್ಟು 11 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಅಮಿಕ್ಷಾ ಡಿ. ನಾಯಕ್, ಮುಲ್ಯ ಐಶ್ವರ್ಯ, ಮೊಹಮ್ಮದ್ ಅರ್ಫಾಜ್, ಖದೀಜಾ ತನಾಝಾ, ಹಫೀಝಾ, ಶಾಜಿನ್ ಅಬ್ದುಲ್ ರಹಿಮಾನ್, ತೇಜಸ್ ಸಿ. ಜಿ., ಶೇಖ್ ಅಬ್ದುಲ್ ತನ್ವೀಮ್, ಮೊಹಮ್ಮದ್ ನಾಫಿ, ಮೊಹಮ್ಮದ್ ಬಶೀರ್ ಹಾಗೂ ಲಿಯೋನಾ ಅಪ್ರಿಲ್ ರೋಡ್ರಿಗಸ್ ಯಶಸ್ವಿಯಾಗಿ ಉತ್ತೀರ್ಣರಾದವರು. ಇನ್ನು ಪ್ರೊಫೆಷನಲ್ ಲೆವೆಲ್‌ನ ಸ್ಟ್ರಾಟಜಿಕ್ ಬಿಸಿನೆಸ್ ರಿಪೋರ್ಟಿಂಗ್ ವಿಷಯದಲ್ಲಿ ಮೊಹಮ್ಮದ್ ಇಫಾಝ್ ಹಾಗೂ ನಿಶಾಂತ್ ಬಿ. ಪೂಜಾರಿ ಉತ್ತೀರ್ಣರಾಗಿದ್ದರೆ, ಪ್ರೊಫೆಷನಲ್ ಲೆವೆಲ್‌ನ ಅಡ್ವಾನ್ಸ್ಡ್ ಆಡಿಟ್ ಅಂಡ್ ಅಶ್ಯುರೆನ್ಸ್ ವಿಷಯದಲ್ಲಿ ಅಲ್ಫಾಜ್ ಉತ್ತೀರ್ಣರಾಗುವ ಮೂಲಕ ಕಾಲೇಜಿನ ಸಾಧನೆಗೆ ಮತ್ತೊಂದು ಗರಿ ಮೂಡಿಸಿದ್ದಾರೆ. ಸಾಧನೆಗೈದ ವಿದ್ಯಾರ್ಥಿಗಳನ್ನು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎಂ. ಮೋಹನ ಆಳ್ವ, ಟ್ರಸ್ಟಿ ವಿವೇಕ ಆಳ್ವ, ಪ್ರಾಂಶುಪಾಲ ಡಾ. ಕುರಿಯನ್, ವಾಣಿಜ್ಯ ವಿಭಾಗದ ಮುಖ್ಯಸ್ಥೆ ಶರ್ಮಿಳಾ ಕುಂದರ್ ಹಾಗೂ ಕೋರ್ಸ್ ಸಂಯೋಜಕ ವಿಘ್ನೇಶ್ ಪ್ರಭು ಅಭಿನಂದಿಸಿದ್ದಾರೆ.

# ನನ್ನನ್ನು ಜೈಲಿಗೆ ಕಳುಹಿಸುವ ಎಚ್.ಡಿ.ಕೆ ಪ್ರಯತ್ನ ಮುಂದುವರಿಯಲಿ – ಡಿಕೆಶಿ

ಒಂದನೇ ಪುಟದಿಂದ......

ನಡೆಯುತ್ತಿವೆ. ಜೈಲಿಗೆ ಹೋಗುವ ದಿನ ಹತ್ತಿರ ಬಂದಿದೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ, "ಇದಕ್ಕೂ ನಾನು ಸಿದ್ದನಾಗಿದ್ದೇನೆ," ಎಂದು ತಿಳಿಸಿದರು. ತಮ್ಮ ವಿರುದ್ಧದ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, "ನಾನು ಕೃಷ್ಣನ ಜನ್ಮಸ್ಥಳದಲ್ಲಿ ಇದ್ದೆ, ಅಲ್ಲಿಗೆ ಕುಮಾರಸ್ವಾಮಿಯವರು ಬಂದು ಭೇಟಿ ಮಾಡಿದ್ದರು, ನನ್ನನ್ನು ಜೈಲಿಗೆ ಕಳುಹಿಸಬೇಕೆಂಬ ಸಂಕಲ್ಪ ಮಾಡಿದ್ದೀರೋ ಅದನ್ನು ಮುಂದುವರಿಸಿ. ಆ ಜೈಲಿಗೆ ಹೋಗಿ ಬಂದೇ ನಾನು ರಾಜ್ಯದ ಮುಖ್ಯಮಂತ್ರಿಯಾಗಿ ಕೂತಿದ್ದೇನೆ. ನಾನು ಜೈಲಿಗೆ ಹೋಗಿದ್ದ ಪ್ರಕರಣ ಎರಡುವರೆ ವರ್ಷಗಳಲ್ಲಿ ವಜಾವಾಗಿದೆ," ಎಂದರು. ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡರ ಕುರಿತು ಮಾತನಾಡಿ, "ಅವರ ಮನಸ್ಸು ನೋಯಿಸಲು ನನಗೆ ಇಷ್ಟವಿಲ್ಲ. ಹೈಕಮಾಂಡ್ ಮೆಚ್ಚಿಸಲು ಈ ತೀರ್ಮಾನಕ್ಕೆ ಬಂದಿದ್ದೀರಿ ಎಂದು ದೇವೇಗೌಡರು ಆರೋಪಿಸಿದ್ದಾರೆ. ಇದು ಅವರು ನನ್ನ ಮೇಲೆ ತೋರುತ್ತಿರುವ ಪ್ರೀತಿ ಅಷ್ಟೇ. 2006ರಲ್ಲಿ ಈ ಯೋಜನೆ ಮಾಡಿದಾಗ ಯಾವ ಹೈಕಮಾಂಡ್ ಮೆಚ್ಚಿಸಲು ಹೋಗಿದ್ದಿರಿ?" ಎಂದು ಪ್ರಶ್ನಿಸಿದರು.

# ಅಭಿವೃದ್ಧಿ ಕಾಮಗಾರಿ ಸ್ಥಳಕ್ಕೆ ಶಾಸಕ ಐವನ್ ಡಿ'ಸೋಜಾ ಭೇಟಿ



ಮಂಗಳೂರು : ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕಣ್ಣೂರು ಪ್ರದೇಶದಲ್ಲಿ ಮಹಾತ್ಮಾ ಗಾಂಧಿ ವಿಕಾಸ ಯೋಜನೆಯಡಿ ನಿರ್ಮಾಣಗೊಳ್ಳುತ್ತಿರುವ ತೋಡು ಕಾಮಗಾರಿ ಪ್ರದೇಶಕ್ಕೆ ವಿಧಾನ ಪರಿಷತ್ ಶಾಸಕರಾದ ಐವನ್ ಡಿ'ಸೋಜಾ ಅವರು ಭೇಟಿ ನೀಡಿ, ಪ್ರಗತಿ ಪರಿಶೀಲನೆ ನಡೆಸಿದರು. ಕಾಮಗಾರಿ ಸ್ಥಳ ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ನಿಗದಿತ ಗುಣಮಟ್ಟ ಹಾಗೂ ಮಾನದಂಡಗಳಿಗೆ ಅನುಗುಣವಾಗಿ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಿದರು. ಪ್ರಸ್ತುತ ಮಳೆಗಾಲವಾಗಿರುವುದರಿಂದ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು. ಮಹಾತ್ಮಾ ಗಾಂಧಿ ವಿಕಾಸ ಯೋಜನೆಯಡಿ ನಗರದ ವಿವಿಧ ಭಾಗಗಳಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ.

# ಮಾನಸಿಕ ಕಿರುಕುಳ ವಿರುದ್ಧ ಅಂಚೆ ನೌಕರರ ದೇಶವ್ಯಾಪಿ ಮುಷ್ಕರ



ಮಂಗಳೂರು : ಭಾರತೀಯ ಅಂಚೆ ಇಲಾಖೆಯ 170 ವರ್ಷಗಳ ಸುದೀರ್ಘ ಇತಿಹಾಸದಲ್ಲಿ ನೌಕರರು ಜನಸಾಮಾನ್ಯರೊಂದಿಗೆ ಅವಿನಾಭಾವ ಸಂಬಂಧವನ್ನು ಹೊಂದಿದ್ದಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಕೇಂದ್ರ ಸರ್ಕಾರದ ಅವೈಜ್ಞಾನಿಕ ನೀತಿಗಳಿಂದಾಗಿ ಇಲಾಖೆಯನ್ನು ಕೇವಲ ಲಾಭದಾಯಕ ಉದ್ಯಮವನ್ನಾಗಿ ಮಾಡಲು ಪ್ರಯತ್ನಿಸಲಾಗುತ್ತಿದೆ ಎಂದು ನೌಕರರ ಒಕ್ಕೂಟ ಆಕ್ರೋಶ ವ್ಯಕ್ತಪಡಿಸಿದೆ. ವಿದೇಶಿ ಸಲಹಾ ಸಂಸ್ಥೆಯಾದ ಮೆಕಿನ್ಸೆ ಶಿಫಾರಸಿನ ಮೇರೆಗೆ ನಡೆಯುತ್ತಿರುವ ಇಲಾಖೆಯ ಖಾಸಗೀಕರಣದ ಕ್ರಮಗಳು ಹಾಗೂ ಸಿಬ್ಬಂದಿಗಳ ಮೇಲೆ ಹೇರಲಾಗುತ್ತಿರುವ ತೀವ್ರ ಮಾನಸಿಕ ಒತ್ತಡವನ್ನು ಖಂಡಿಸಿ ಭಾರತೀಯ ಅಂಚೆ ನೌಕರರ ಒಕ್ಕೂಟ, ಕರ್ನಾಟಕ ವಲಯವು ದೇಶವ್ಯಾಪಿ ಮುಷ್ಕರಕ್ಕೆ ಕರೆ ನೀಡಿದೆ. ಇಲಾಖೆಯಲ್ಲಿ 'ಟಾರ್ಗೆಟ್ ಸಾಧನೆ' ಹೆಸರಿನಲ್ಲಿ ಸಿಬ್ಬಂದಿ ಹಾಗೂ ಜಿಡಿಎಸ್ ನೌಕರರ ಮೇಲೆ ವಿಪರೀತ ಒತ್ತಡ ಹೇರಲಾಗುತ್ತಿದ್ದು, ತಮ್ಮ ಸ್ವಂತ ಹಣದಿಂದಲೇ ವಿವಿಧ ಖಾತೆಗಳನ್ನು ತೆರೆಯುವಂತೆ ಒತ್ತಾಯಿಸಲಾಗುತ್ತಿದೆ ಎಂದು ಒಕ್ಕೂಟ ದೂರಿದೆ.

# ಅಂಗನವಾಡಿ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಂಗಳೂರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನೆ ಮಂಗಳೂರು ನಗರ ಮತ್ತು ಗ್ರಾಮಾಂತರ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಶಿಶು ಅಭಿವೃದ್ಧಿ ಯೋಜನೆ ಮಂಗಳೂರು (ನಗರ) ವ್ಯಾಪ್ತಿಯ 7 ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಹಾಗೂ 32 ಅಂಗನವಾಡಿ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ.:0824–2959809, 0824–2263199 ಸಂಪರ್ಕಿಸಬಹುದು.

# ಮಂಗಳೂರು ವಿ.ವಿ: ಪಿಹೆಚ್.ಡಿ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

ಮಂಗಳೂರು: 2026–27ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗಗಳು, ವಿಶ್ವವಿದ್ಯಾನಿಲಯ ಕಾಲೇಜು ಮಂಗಳೂರು ಹಾಗೂ ಮಾನ್ಯತೆ ಪಡೆದ ಸಂಶೋಧನಾ ಕೇಂದ್ರಗಳಲ್ಲಿರುವ ಪಿ.ಹೆಚ್.ಡಿ ಕಾರ್ಯಕ್ರಮಗಳ ಲಭ್ಯವಿರುವ ಸೀಟುಗಳಿಗೆ ನೋಂದಾಯಿಸಲು ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ದ್ವಿಪ್ರತಿಗಳಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳಿಗಾಗಿ ಮಂಗಳೂರು ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.mangaloreuniversity.ac.inನಿಂದ ಪಡೆದುಕೊಳ್ಳಬಹುದು.

# ವೈದ್ಯ ವೃತ್ತಿಯಲ್ಲಿ ನೈತಿಕತೆ, ಸೇವೆಗೆ ಆದ್ಯತೆ ಅಗತ್ಯ : ಡಾ. ಎಂ. ಮೋಹನ ಆಳ್ವ




ಮೂಡಬಿದಿರೆ : ವೈದ್ಯಕೀಯ ವೃತ್ತಿಯಲ್ಲಿ ರೋಗಿಯ ಸುರಕ್ಷತೆ, ನೈತಿಕತೆ ಹಾಗೂ ಸೇವಾ ಮನೋಭಾವನೆ ಅತ್ಯಂತ ಪ್ರಮುಖ ಮೌಲ್ಯಗಳಾಗಿವೆ. ವೈದ್ಯ ಮತ್ತು ರೋಗಿಯ ಸಂಬಂಧವು ಪರಸ್ಪರ ನಂಬಿಕೆ ಹಾಗೂ ಜವಾಬ್ದಾರಿಯ ಮೇಲೆ ನಿರ್ಮಾಣವಾಗಬೇಕು ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎಂ. ಮೋಹನ ಆಳ್ವ ಅಭಿಪ್ರಾಯಪಟ್ಟರು. ಮೂಡುಬಿದಿರೆಯ ಆಳ್ವಾಸ್ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಾರತೀಯ ವೈದ್ಯಕೀಯ ಸಂಘದ (ಐಎಂಎ) ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ರಾಷ್ಟ್ರೀಯ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಾಲಾನಂತರದಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆಗಳಾಗಿದ್ದು, ವೈದ್ಯರು ಹೊಸ ತಂತ್ರಜ್ಞಾನ ಹಾಗೂ ಜ್ಞಾನಕ್ಕೆ ಹೊಂದಿಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಐಎಂಎ ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷ ಡಾ. ಟಿ.ಎ. ವೀರಭದ್ರಪ್ಪ ಮಾತನಾಡಿ, ವೈದ್ಯರ ಸಮಸ್ಯೆಗಳಿಗೆ ಸ್ಪಂದಿಸುವುದು ಮತ್ತು ಅವರ ಹಿತ ಕಾಯುವುದು ಸಂಘದ ಮುಖ್ಯ ಉದ್ದೇಶವಾಗಿದೆ ಎಂದರು.

# ಮಹಿಳಾ ಸಬಲೀಕರಣದಿಂದ ಸಮಾಜದ ಪ್ರಗತಿ: ಡಾ. ಪ್ರಣಮ್ಯ ಭಟ್




ಮೂಡುಬಿದಿರೆ: ಪ್ರತಿಯೊಬ್ಬ ವ್ಯಕ್ತಿಯಲ್ಲಿರುವ ಅಪಾರ ಸಾಧ್ಯತೆಗಳಿಗೆ ಸೂಕ್ತ ಅವಕಾಶ ಹಾಗೂ ಸಮಾನತೆ ದೊರೆತಾಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ. ಅದರಲ್ಲೂ ಮಹಿಳೆಯರ ಸಬಲೀಕರಣವು ಕುಟುಂಬ ಮತ್ತು ರಾಷ್ಟ್ರದ ಪ್ರಗತಿಗೆ ಮುಖ್ಯ ಅಡಿಪಾಯವಾಗಿದೆ ಎಂದು ನಿಟ್ಟೆ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ಪ್ರಣಮ್ಯ ಭಟ್ ಅಭಿಪ್ರಾಯಪಟ್ಟರು. ಅವರು ಆಳ್ವಾಸ್ ಪದವಿಪೂರ್ವ ಕಾಲೇಜಿನ ಮಹಿಳಾ ಕ್ಷೇಮಪಾಲನಾ ಸಮಿತಿ ಹಾಗೂ ಆಂತರಿಕ ದೂರು ನಿರ್ವಹಣಾ ಸಮಿತಿಯ ಶೈಕ್ಷಣಿಕ ವರ್ಷದ ಚಟುವಟಿಕೆಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡುತ್ತಿದ್ದರು. ಇಂದಿನ ದಿನಗಳಲ್ಲಿ ಮಹಿಳೆಯರಿಗೆ ಶಿಕ್ಷಣ, ಉದ್ಯೋಗ ಮತ್ತು ನಾಯಕತ್ವದ ಅವಕಾಶಗಳು ಸಿಗುತ್ತಿರುವುದು ಉತ್ತಮ ಬೆಳವಣಿಗೆಯಾಗಿದ್ದರೂ, ನಿಜವಾದ ಸಮಾನತೆಗಾಗಿ ಜನರ ಮನೋಭಾವದಲ್ಲಿ ಬದಲಾವಣೆ ಬರಬೇಕಿದೆ. ದೈಹಿಕ ಹಾಗೂ ಮಾನಸಿಕ ಭಿನ್ನತೆಗಳಿದ್ದರೂ ಹಕ್ಕುಗಳು, ಗೌರವ ಹಾಗೂ ಅವಕಾಶಗಳ ವಿಷಯದಲ್ಲಿ ಯಾವುದೇ ತಾರತಮ್ಯ ಇರಬಾರದು ಎಂದು ಅವರು ಹೇಳಿದರು.

# ಅತಿಥಿ ಉಪನ್ಯಾಸಕರ ಆಯ್ಕೆ : ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಮಂಗಳೂರು : ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರನ್ನು (ಅತಿಥಿ ಗ್ರಂಥಪಾಲಕರು ಹಾಗೂ ಅತಿಥಿ ದೈಹಿಕ ಶಿಕ್ಷಣ ನಿರ್ದೇಶಕರು ಒಳಗೊಂಡಂತೆ) ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಇಲಾಖೆಯ ಅಧಿಕೃತ ವೆಬ್‌ಸೈಟ್ https://dce.karnataka.gov.in ಅನ್ನು ಪ್ರತಿ ನಿತ್ಯ ಗಮನಿಸುವಂತೆ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಆಯುಕ್ತರು, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಶಿವಮೊಗ್ಗ : 2026–27ನೇ ಸಾಲಿನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿ.ಟಿ.ಟಿ.ಸಿ) ದಲ್ಲಿ ಎವಿಟಿಐ–ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ, ಯುವತಿಯರಿಗೆ ವಿವಿಧ ಕೌಶಲ್ಯಾಭಿವೃದ್ಧಿ ಉಚಿತ ತರಬೇತಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ: 08182-246054/ 9448307027/ 9449286543 ಗಳನ್ನು ಸಂಪರ್ಕಿಸಬಹುದೆಂದು ಸಂಸ್ಥೆಯ ಪ್ರಾಂಶುಪಾಲರು ತಿಳಿಸಿರುತ್ತಾರೆ.

# ವಿದ್ಯಾಗಿರಿಯಲ್ಲಿ ರಂಗಭೂಮಿ ಜೀವಕಳೆ ತುಂಬಿದ 'ಕನ್ನಡ ಗಾನಗುಚ್ಛ'



ಮೂಡುಬಿದಿರೆ: ಕನ್ನಡ ಸಾಹಿತ್ಯದ ಸಂಗೀತ ವೈವಿಧ್ಯತೆಯನ್ನು ಒಂದೇ ವೇದಿಕೆಯಲ್ಲಿ ಅನಾವರಣಗೊಳಿಸಿದ ಅಪರೂಪದ ಪ್ರಯೋಗ 'ಕನ್ನಡ ಗಾನಗುಚ್ಛ' ಕಾರ್ಯಕ್ರಮ ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎಂ. ಮೋಹನ ಆಳ್ವ ನುಡಿದರು. ಆಳ್ವಾಸ್ ರಂಗ ಅಧ್ಯಯನ ಕೇಂದ್ರದ ನಿರ್ದೇಶಕ ಡಾ. ಜೀವನ ರಾಮ್ ಸುಳ್ಯರ ಸಂಯೋಜನೆಯಲ್ಲಿ ವಿದ್ಯಾಗಿರಿಯ ನುಡಿಸಿರಿ ವೇದಿಕೆಯಲ್ಲಿ ಆಯೋಜನೆಗೊಂಡ 2 ಗಂಟೆಗಳ ಈ ಕಾರ್ಯಕ್ರಮವನ್ನು ವೀಕ್ಷಿಸಿ ಅವರು ಮಾತನಾಡಿದರು. ಕಲಾವಿದರ ಪ್ರದರ್ಶನವನ್ನು ಶ್ಲಾಘಿಸಿದ ಡಾ. ಆಳ್ವ, ಹಾಡಿಗೆ ಇರುವ ಅಪಾರ ಶಕ್ತಿಯನ್ನು ಕಲಾವಿದರು ಪರಿಣಾಮಕಾರಿಯಾಗಿ ಅನಾವರಣಗೊಳಿಸಿದ್ದಾರೆ.ಎಂದರು.

# ಕುಕ್ಕೆಗೆ ಮಾಜಿ ಸಚಿವ ಎಚ್ ಡಿ ರೇವಣ್ಣ ಭೇಟಿ



ಸುಬ್ರಹ್ಮಣ್ಯ : ರಾಜ್ಯ ಸರಕಾರದ ಮಾಜಿ ಸಚಿವ ಎಚ್‌ಡಿ ರೇವಣ್ಣ ಕುಕ್ಕೆಶ್ರೀ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ಭೇಟಿ ನೀಡಿ ಪಂಚಾಮೃತ ಮಹಾಭಿಷೇಕದಲ್ಲಿ ಭಾಗಿಯಾಗಿ, ಮಹಾಮಂಗಳಾರತಿ ವೀಕ್ಷಿಸಿ ತೀರ್ಥ ಪ್ರಸಾದ ಸ್ವೀಕರಿಸಿ, ನಂತರ ಭೋಜನ ಪ್ರಸಾದ ಸ್ವೀಕರಿಸಿದರು. ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದ ವತಿಯಿಂದ ಶಿಷ್ಟಾಚಾರ ವಿಭಾಗದ ಪ್ರಮೋದ್ ಕುಮಾರ್ ರೇವಣ್ಣ ಅವರನ್ನು ಬರ ಮಾಡಿಕೊಂಡರು. ಈ ಸಂದರ್ಭದಲ್ಲಿ ದಕ್ಷಿಣಕನ್ನಡ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಮಾಧವ ಗೌಡ, ದಕ ಜಿಲ್ಲಾ ಮಹಿಳಾ ಘಟಕದ ಪ್ರಧಾನ ಕಾರ್ಯಾಧ್ಯಕ್ಷೆ ಪ್ರಿಯಾ ಸಾಲಿಯಾನ್, ದಿವಾಕರ ಬೆಂಗಳೂರು, ಜಯಂತ ಪಂಬತ್ತಾಡಿ, ಬಿಜೆಪಿ ಮುಖಂಡ ಸಂತೋಷ್ ಮುಂತಾದವರು ಹಾಜರಿದ್ದರು. ಮಾಜಿ ಸಚಿವ ಎಚ್‌ಡಿ ರೇವಣ್ಣ ಅವರು ಶ್ರೀ ಸಂಪುಟ ನರಸಿಂಹ ಸ್ವಾಮಿ ಮಠಕ್ಕೆ ಭೇಟಿ ನೀಡಿ ಪೀಠಾಧ್ಯಕ್ಷ ಶ್ರೀ ಶ್ರೀ ವಿದ್ಯಾಪ್ರಸನ್ನ ತೀರ್ಥ ಸ್ವಾಮೀಜಿಯವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

# ಅಗ್ನಿವೀರ್ 02/2027ರ ಆಯ್ಕೆ ಪರೀಕ್ಷೆಗೆ ಅರ್ಜಿ ಆಹ್ವಾನ

ಮಡಿಕೇರಿ : ಭಾರತೀಯ ವಾಯುಪಡೆಯಿಂದ ಅಗ್ನಿಪಥ್ ಯೋಜನೆಯಡಿಯಲ್ಲಿ ಅಗ್ನಿವೀರ್ ವಾಯು ಪ್ರವೇಶ 02/2027ರ ಆಯ್ಕೆ ಪರೀಕ್ಷೆಗಾಗಿ ಅವಿವಾಹಿತ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗಾಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಮಡಿಕೇರಿ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು.

# ಸುದ್ದಿ ತುಣುಕು

ಸುಮಾರು 12 ವರ್ಷಗಳ ಹಿಂದೆ ಅಕ್ರಮವಾಗಿ ಗಡಿ ದಾಟಿ ಭಾರತಕ್ಕೆ ಪ್ರವೇಶಿಸಿದ್ದ ಆರೋಪಿ ಶೋರನಜೀತ್ ಮಂಡಲ್ ಸಿಂಧನೂರು ತಾಲೂಕಿನ ಕ್ಯಾಂಪ್‌ನಲ್ಲಿ ಅನಧಿಕೃತವಾಗಿ ನೆಲೆಸಿದ್ದ ಎಂದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಸುಬ್ರಹ್ಮಣ್ಯ ಸಮೀಪದ ಐನೆಕಿದು ಗ್ರಾಮದ ಬಾಣೂರು ಪ್ರದೇಶದಲ್ಲಿ ರಸ್ತೆ ಸಂಪರ್ಕವಿಲ್ಲದ ಹೊಳೆಯ ಆಚೆ ಇರುವ ಮನೆಗಳಿಗೆ ತಲುಪಲು ಬಿಎಲ್‌ಓ ಲೋಹಿತ್ ಹಾಗೂ ಬಿಎಲ್‌ಎ ಗುಣವರ್ಧನ ಸ್ಥಳೀಯರು ಬಳಸುವ ಹಗ್ಗದ ವ್ಯವಸ್ಥೆಯನ್ನೇ ಆಶ್ರಯಿಸಿ ಮಾದರಿಯಾದರು.

ರಾಜ್ಯ ರಾಜಕೀಯ ವಲಯದ ಮಹತ್ವದ ಬೆಳವಣಿಗೆಯೊಂದರಲ್ಲಿ, ವಿಧಾನ ಪರಿಷತ್ ಉಪ ಸಭಾಪತಿ ಹಾಗೂ ಸ್ಥಳೀಯ ಸಂಸ್ಥೆಗಳ ಕ್ಷೇತ್ರದ ಎಂಎಲ್‌ಸಿ ಎಂ.ಕೆ. ಪ್ರಾಣೇಶ್ ಅವರಿಗೆ ಸುಪ್ರೀಂಕೋರ್ಟ್‌ನಲ್ಲಿ ಭಾರಿ ಹಿನ್ನಡೆಯಾಗಿದೆ.

ಉಬ್ರಾಣಿ ಅರಣ್ಯ ಪ್ರದೇಶದಲ್ಲಿ ಬೀಡುಬಿಟ್ಟು ರೈತರಿಗೆ ತೊಂದರೆ ನೀಡುತ್ತಿದ್ದ ಕಾಡಾನೆಯನ್ನು ಅರಣ್ಯ ಇಲಾಖೆಯ ಸಿಬ್ಬಂದಿ ಕೊನೆಗೂ ಸೆರೆ ಹಿಡಿದಿದ್ದಾರೆ. ಜಿಲ್ಲೆಯ ಚನ್ನಗಿರಿ ತಾಲೂಕಿನ ಉಬ್ರಾಣಿ ಹೋಬಳಿಯ ಅರಣ್ಯ ಪ್ರದೇಶದಲ್ಲಿ ಆನೆ ಸೆರೆಯಾಗಿದೆ.

ಐದು ವರ್ಷದ ಮಕ್ಕಳಿಗೆ ಹವಾಮಾನ ವೈಪರಿತ್ಯದಿಂದ ಕೈ, ಕಾಲು, ಬಾಯಿ (ಹೆಚ್ ಎಫ್‌ಎಂಡಿ) ಕಾಯಿಲೆ ಹೆಚ್ಚಾಗುತ್ತಿದ್ದು, ಪಾಲಕರ ಆತಂಕಕ್ಕೆ ಕಾರಣವಾಗಿದೆ. ಹುಬ್ಬಳ್ಳಿ ನಗರದ ಕೆಎಂಸಿಆರ್‌ಐ ಆಸ್ಪತ್ರೆ ಸೇರಿದಂತೆ ಖಾಸಗಿ ಚಿಕ್ಕಮಕ್ಕಳ ಆಸ್ಪತ್ರೆಗಳಲ್ಲಿ ಹೆಚ್ಚು ರೋಗಿಗಳು ದಾಖಲಾಗುತ್ತಿದ್ದಾರೆ.

ಕೊಡಗಿನ ಹೋಂಸ್ಟೇವೊಂದರಲ್ಲಿ ಅಮೆರಿಕದ ಪ್ರವಾಸಿ ಮಹಿಳೆಯ ಮೇಲೆ ನಡೆದಿದೆ ಎನ್ನಲಾದ ಅತ್ಯಾಚಾರ ಪ್ರಕರಣ ಸಂಬಂಧ ಹೋಂಸ್ಟೇ ಮಾಲೀಕರನ್ನು ಅಕ್ರಮವಾಗಿ ಬಂಧಿಸಿದ್ದಕ್ಕಾಗಿ ಅವರಿಗೆ 5 ಲಕ್ಷ ರೂ.ಗಳ ಪರಿಹಾರ ನೀಡಬೇಕು ಎಂದು ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ಆದೇಶಿಸಿದೆ.

ಕರ್ನಾಟಕದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯ ಪರಿಷ್ಕೃತ ವೇಳಾಪಟ್ಟಿ ಪ್ರಕಟವಾಗಿದ್ದು, ಗಣತಿ ನಮೂನೆ ಪಡೆದು ಸಲ್ಲಿಸಲು ಆಗಸ್ಟ್ 8ರವರೆಗೆ ದಿನಾಂಕ ವಿಸ್ತರಣೆ ಮಾಡಲಾಗಿದೆ.

ಇಂಗ್ಲೆಂಡ್‌ನಿಂದ ಬಹಳ ಸಮಯದ ನಂತರ ಮನೆಗೆ ಬಂದ ಪತಿಯ ವಿರುದ್ಧ ಅತಿಕ್ರಮ ಪ್ರವೇಶ ಆರೋಪದ ಮೇಲೆ ಪತ್ನಿ ದಾಖಲಿಸಿದ ಪ್ರಕರಣಕ್ಕೆ ಸಂಬಂಧಿಸಿದ ತನಿಖೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿ ಆದೇಶಿಸಿದೆ.

ಬೀದಿ ನಾಯಿಗಳ ದಾಳಿಯಿಂದ ಒಂದೂವರೆ ವರ್ಷದ ಹೆಣ್ಣು ಮಗು ಗಂಭೀರವಾಗಿ ಗಾಯಗೊಂಡು ಸಾವನ್ನಪ್ಪಿರುವ ಘಟನೆ ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಕೆ.ಹಂಚಿನಾಳ ಕ್ಯಾಂಪ್‌ನಲ್ಲಿ ಬುಧವಾರ ಮುಂಜಾನೆ ನಡೆದಿದೆ.

ಸಚಿವ ಸತೀಶ್ ಜಾರಕಿಹೊಳಿ ಅವರ ಸಂಬಂಧಿಗಳ ಮೇಲೆ ಇ.ಡಿ ದಾಳಿ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿದೆ.

ಮತದಾರರಿಗೆ ಹೆಚ್ಚಿನ ಮಾಹಿತಿ ನೀಡಲು ಹಾಗೂ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಭಾಗಿಯಾಗಿಸಲು ಪ್ರತಿ ಶನಿವಾರ ಹಾಗೂ ಭಾನುವಾರ ವಿಶೇಷ ಶಿಬಿರ ಹಮ್ಮಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ.

ಭಾರತ ಬ್ರಿಟನ್ ನಡುವಿನ ಮುಕ್ತ ವ್ಯಾಪಾರ ಒಪ್ಪಂದದಿಂದ ರಾಜ್ಯದ ಬಿಟಿ, ಕಾಫಿ, ಸಾಂಬಾರ ಪದಾರ್ಥ, ಜವಳಿ, ಫಾರ್ಮಾ ವಲಯಗಳಿಗೆ ಹೆಚ್ಚು ಅನುಕೂಲ ಆಗಲಿದೆ ಸಚಿವ ಎಂ ಬಿ ಪಾಟೀಲ್ ಹೇಳಿದ್ದಾರೆ.

## ಪತ್ರೋಲಿ



**ಬೇಕಾಗುವ ಸಾಮಗ್ರಿಗಳು :**
ಅಕ್ಕಿ– 250 ಗ್ರಾಂ
ಅರಿಶಿನದ ಎಲೆ– 10 ರಿಂದ 15
ಬೆಲ್ಲ–250 ಗ್ರಾಂ
ತೆಂಗಿನ ಕಾಯಿ ತುರಿ–1ಕಪ್
ಉಪ್ಪು– ರುಚಿಗೆ ತಕ್ಕಷ್ಟು,
ಏಲಕ್ಕಿ– ಸ್ವಲ್ಪ

**ಮಾಡುವ ವಿಧಾನ :**
ಮೊದಲಿಗೆ ಅಕ್ಕಿಯನ್ನು ಸುಮಾರು ನಾಲ್ಕರಿಂದ ಐದು ತಾಸು ನೀರಿನಲ್ಲಿ ನೆನೆಸಿಟ್ಟು, ನಂತರ ಅಕ್ಕಿಗೆ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ನುಣ್ಣಗೆ ಗಟ್ಟಿಯಾಗಿ ರುಬ್ಬಿಕೊಳ್ಳಬೇಕು. ನಂತರ ಅರಿಶಿನದ ಎಲೆಗಳನ್ನು ಎರಡೂ ಕಡೆ ಚೆನ್ನಾಗಿ ತೊಳೆದು ಶುಚಿಗೊಳಿಸಿಕೊಂಡು ಎಲೆಯ ತುದಿಯನ್ನು ಕತ್ತರಿಸಿಕೊಳ್ಳಬೇಕು. ನಂತರ ಬೆಲ್ಲವನ್ನು ಚೆನ್ನಾಗಿ ಪುಡಿಮಾಡಿ ಅದಕ್ಕೆ ತೆಂಗಿನ ಕಾಯಿಯ ಜೊತೆಗೆ ಏಲಕ್ಕಿ ಪುಡಿಯನ್ನು ಮಿಶ್ರಣ ಮಾಡಿ ಕಲಸಿಕೊಳ್ಳಬೇಕು, ನೀರಿನ ಅವಶ್ಯಕತೆ ಇರುವುದಿಲ್ಲ. ಈಗ ಇಡ್ಲಿ ಮಾಡುವ ಪಾತ್ರೆಗೆ ನೀರು ಹಾಕಿ ಹಬೆ ಆರಂಭವಾಗುತ್ತಿದ್ದಂತೆ ರುಬ್ಬಿದ ಮಿಶ್ರಣವನ್ನು ಎಲೆಗಳಿಗೆ ಹಚ್ಚಬೇಕು, ಹಚ್ಚಿದಾಗ ಸೋರುವ ಹಾಗಿರಬಾರದು ಈಗ ಹಿಟ್ಟಿನ ಮೇಲೆ ಕಾಯಿಬೆಲ್ಲ ಕಾಯಿ ಎಲೆಗಳನ್ನು ಮಡಚಿ ಹಬೆ ಆಡುವ ಪಾತ್ರೆಯಲ್ಲಿ ಇಟ್ಟು 30 ನಿಮಿಷ ಬೇಯಿಸಿದರೆ ರುಚಿಕರವಾದ ಮತ್ತು ಆರೋಗ್ಯಕರವಾದ ಪತೋಲಿ ಸವಿಯಲು ಸಿದ್ದ.

## ಯುಎಇಯಲ್ಲಿ ಲಾಂಗೆವಿಟಿ ಮೆಡಿಸಿನ್ ಶಿಕ್ಷಣ




ಅಜ್ಮಾನ್: ಯುನೈಟೆಡ್ ಅರಬ್ ಎಮಿರೇಟ್ಸ್‌ನ (ಯುಎಇ) ಪ್ರಖ್ಯಾತ ಮತ್ತು ಪ್ರಮುಖ ಆರೋಗ್ಯ ಸಂಸ್ಥೆಯಾದ ತುಂಬೆ ಗ್ರೂಪ್, ಸ್ವಿಟ್ಜರ್‌ಲ್ಯಾಂಡ್‌ನ ಜಿನೀವಾ ಕಾಲೇಜ್ ಆಫ್ ಲಾಂಗೆವಿಟಿ ಸೈನ್ಸ್ (GCLS) ಸಂಸ್ಥೆಯೊಂದಿಗೆ ಅತ್ಯಂತ ಮಹತ್ವದ ಹಾಗೂ ಐತಿಹಾಸಿಕ ತಿಳುವಳಿಕೆ ಒಪ್ಪಂದಕ್ಕೆ (MoU) ಸಹಿ ಹಾಕಿದೆ. ಅತ್ಯಾಧುನಿಕ ಶೈಕ್ಷಣಿಕ ಶಿಕ್ಷಣವನ್ನು ಪರಿಚಯಿಸಿದ ಗಲ್ಫ್ ರಾಷ್ಟ್ರಗಳ ಮೊದಲ ಖಾಸಗಿ ವೈದ್ಯಕೀಯ ವಿಶ್ವವಿದ್ಯಾಲಯ ಎಂಬ ಹೆಗ್ಗಳಿಕೆಗೆ ಥಂಬೇ ಗ್ರೂಪ್‌ನ ಹೆಮ್ಮೆಯ ಸಂಸ್ಥೆಯಾದ ಗಲ್ಫ್ ಮೆಡಿಕಲ್ ಯೂನಿವರ್ಸಿಟಿಯು (GMU) ಪಾತ್ರವಾಗಿದೆ.

## ಶೇಖ್ ಹಸೀನಾಗೆ ಜೈಲು ಶಿಕ್ಷೆ ಖಚಿತ : ಬಾಂಗ್ಲಾ ಸಚಿವೆ



ಢಾಕ : ಪದಚ್ಯುತಗೊಂಡಿರುವ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಒಂದು ವೇಳೆ ದೇಶಕ್ಕೆ ಹಿಂತಿರುಗಿದರೆ ಅವರನ್ನು ನೇರವಾಗಿ ಜೈಲಿಗಟ್ಟಲಾಗುವುದು ಎಂದು ಬಾಂಗ್ಲಾದೇಶದ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವೆ ಶಾಮಾ ಒಬೈದ್ ಇಸ್ಲಾಂ ಸ್ಪಷ್ಟಪಡಿಸಿದ್ದಾರೆ. ಇದೇ ಡಿಸೆಂಬರ್‌ನಲ್ಲಿ ಶೇಖ್ ಹಸೀನಾ ಢಾಕಾಕ್ಕೆ ಮರಳಲು ಯೋಜಿಸುತ್ತಿದ್ದಾರೆ ಎಂಬ ವರದಿಗಳು ಹೊರಬಿದ್ದ ಬೆನ್ನಲ್ಲೇ ಬಾಂಗ್ಲಾದೇಶ ಸರ್ಕಾರದ ವತಿಯಿಂದ ಈ ಖಡಕ್ ಹೇಳಿಕೆ ಹೊರಬಿದ್ದಿದೆ.

## ಸೌದಿ ಏರ್‌ಪೋರ್ಟ್ ಮೇಲೆ ಹೌತಿ ದಾಳಿ



ರಿಯಾಧ್ : ಮಧ್ಯಪ್ರಾಚ್ಯದಲ್ಲಿ ಅಮೆರಿಕಾ ಮತ್ತು ಇರಾನ್ ನಡುವಿನ ಸಂಘರ್ಷ ತಾರಕಕ್ಕೇರಿರುವ ಬೆನ್ನಲ್ಲೇ, ಇರಾನ್ ಬೆಂಬಲಿತ ಯೆಮೆನ್‌ನ ಹೌತಿ ಬಂಡುಕೋರ ಪಡೆಗಳು ಸೌದಿ ಅರೇಬಿಯಾದ ಮೇಲೆ ಭೀಕರ ದಾಳಿ ನಡೆಸಿವೆ. ಸೌದಿ ಅರೇಬಿಯಾದ ಅಭಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಎರಡು ಪ್ರಮುಖ ಮಿಲಿಟರಿ ನೆಲೆಗಳನ್ನು ಗುರಿಯಾಗಿಸಿಕೊಂಡು ಹೌತಿ ಪಡೆಗಳು ಬ್ಯಾಲಿಸ್ಟಿಕ್ ಕ್ಷಿಪಣಿಗಳು ಹಾಗೂ ಸರಣಿ ಡ್ರೋನ್‌ಗಳ ಮೂಲಕ ದಾಳಿ ನಡೆಸಿವೆ.

## ಪಾಕ್ ರೇಂಜರ್‌ಗಳಿಂದ ಪಿಒಕೆ ಮಸೀದಿ ಧ್ವಂಸ



ಪಿಒಕೆ : ಪಾಕ್ ಆಕ್ರಮಿತ ಕಾಶ್ಮೀರದಲ್ಲಿ (ಪಿಒಕೆ) ಮೂಲಸೌಕರ್ಯಗಳಿಗಾಗಿ ಆಗ್ರಹಿಸಿ ಸ್ಥಳೀಯ ಜನತೆ ನಡೆಸುತ್ತಿರುವ ಹೋರಾಟವು 33 ನೇ ದಿನಕ್ಕೆ ಕಾಲಿಟ್ಟಿದ್ದು, ಪರಿಸ್ಥಿತಿ ತೀವ್ರ ಉದ್ವಿಗ್ನಗೊಂಡಿದೆ. ಪ್ರತಿಭಟನೆಯನ್ನು ಹತ್ತಿಕ್ಕಲು ಪಾಕಿಸ್ತಾನ ಸರ್ಕಾರ ರೇಂಜರ್ ಪಡೆಗಳನ್ನು ಬಳಸುತ್ತಿದ್ದು, ರಾವಲ್ ಕೋಟ್‌ನಲ್ಲಿ ಈ ಪಡೆಗಳು ಅಟ್ಟಹಾಸ ಮೆರೆದಿವೆ ಎಂದು ಸ್ಥಳೀಯರು ಗಂಭೀರ ಆರೋಪ ಮಾಡಿದ್ದಾರೆ. ಹೋರಾಟದ ಸ್ಥಳಕ್ಕೆ ನುಗ್ಗಿದ ರೇಂಜರ್‌ಗಳು ಬೂಟುಗಾಲಿನಲ್ಲೇ ಮಸೀದಿಯನ್ನು ಪ್ರವೇಶಿಸಿ, ಅಲ್ಲಿನ ಆವರಣವನ್ನು ಧ್ವಂಸಗೊಳಿಸಿದ್ದಾರೆ.

## ಇರಾನ್ ರಹಸ್ಯವಾಗಿ ಪರಮಾಣು ನಿರ್ಮಾಣ



ಅಮೇರಿಕ : ಇತ್ತೀಚೆಗೆ ನಡೆದ ಅಮೆರಿಕ ಮತ್ತು ಇಸ್ರೇಲ್ ವೈಮಾನಿಕ ದಾಳಿಗಳಲ್ಲಿ ಧ್ವಂಸಗೊಂಡಿದ್ದ ತನ್ನ ಪ್ರಮುಖ ಪರಮಾಣು ಮತ್ತು ಕ್ಷಿಪಣಿ ನೆಲೆಗಳನ್ನು ಇರಾನ್ ಅತ್ಯಂತ ವೇಗವಾಗಿ ಮರುನಿರ್ಮಾಣ ಮಾಡುತ್ತಿದೆ ಎಂಬ ವಿಷಯವು ವಾಣಿಜ್ಯ ಉಪಗ್ರಹ ಚಿತ್ರಗಳ ಮೂಲಕ ಜಗತ್ತಿಗೆ ಬಹಿರಂಗಗೊಂಡಿದೆ. ಈ ಕುರಿತು ಅಂತರರಾಷ್ಟ್ರೀಯ ಮಾಧ್ಯಮವೊಂದು ನಡೆಸಿರುವ ಆಳವಾದ ದೃಶ್ಯ ತನಿಖೆಯು ಜಾಗತಿಕ ರಾಜತಾಂತ್ರಿಕ ವಲಯಗಳಲ್ಲಿ ತೀವ್ರ ಸಂಚಲನ ಮೂಡಿಸಿದೆ.

## ಭಾರತದ ತಪ್ಪು ನಕ್ಷೆ : ತೀವ್ರ ಆಕ್ಷೇಪ



ಢಾಕಾ : ಬಾಂಗ್ಲಾದೇಶದ ರಾಜಧಾನಿ ಢಾಕಾದಲ್ಲಿ ನಡೆದ ಅಂತರರಾಷ್ಟ್ರೀಯ ವಿಚಾರ ಸಂಕಿರಣವೊಂದರಲ್ಲಿ ಭಾರತದ ತಪ್ಪು ನಕ್ಷೆಯನ್ನು ಪ್ರದರ್ಶಿಸಲಾಗಿದ್ದು, ಇದಕ್ಕೆ ಅಲ್ಲಿನ ಭಾರತೀಯ ಹೈಕಮಿಷನ್ ಅಧಿಕಾರಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರವು ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಅಂಗವಾಗಿದೆ ಎಂದು ಅವರು ಈ ಸಂದರ್ಭದಲ್ಲಿ ಬಲವಾಗಿ ಪುನರುಚ್ಚರಿಸಿದ್ದಾರೆ. ಭಾರತೀಯ ಹೈಕಮಿಷನ್‌ನ ಪೂಜಾ ಕುಮಾರಿ ಝಾ ಈ ತಪ್ಪನ್ನು ಬೆರಳು ಮಾಡಿ ತೋರಿಸಿದರು.

## ವಿಂಬಲ್ಡನ್ ಡಬಲ್ಸ್‌ನಲ್ಲಿ ಹೊಸ ಚಾಂಪಿಯನ್‌ಗಳ ಜಯಭೇರಿ



ಲಂಡನ್ : ಲಂಡನ್‌ನಲ್ಲಿ ನಡೆದ ಮಹಿಳಾ ಡಬಲ್ಸ್‌ನ ರೋಚಕ ಫೈನಲ್ ಪಂದ್ಯದಲ್ಲಿ ಚೀನಾದ ಗುವೊ ಹನ್ಯು ಮತ್ತು ಫ್ರಾನ್ಸ್‌ನ ಕ್ರಿಸ್ಟಿನಾ ಮ್ಲಾಡೆನೋವಿಕ್ ಜೋಡಿಯು ಅದ್ಭುತ ಪ್ರದರ್ಶನ ನೀಡಿತು. ಟೂರ್ನಿಯಲ್ಲಿ 10ನೇ ಶ್ರೇಯಾಂಕ ಹೊಂದಿದ್ದ ಕ್ರಿಸ್ಟಿನಾ–ಗುವೋ ಜೋಡಿಯು ಎರಡನೇ ಶ್ರೇಯಾಂಕದ ಬಲಿಷ್ಠ ಗೇಬ್ರಿಯೆಲಾ ಡಬ್ರೋವ್ಸ್ಕಿ ಮತ್ತು ಲೂಯಿಸಾ ಸ್ಟೆಫಾನಿ ಸವಾಲನ್ನು 6–3, 7–5 ನೇರ ಸೆಟ್‌ಗಳಿಂದ ಧೂಳೀಪಟ ಮಾಡಿತು. ಬ್ರಿಟನ್‌ನ ಹೆನ್ರಿ ಪ್ಯಾಟನ್ ಮತ್ತು ಫಿನ್ಲೆಂಡ್‌ನ ಹ್ಯಾರಿ ಹೆಲಿಯೋವಾರಾ ಜೋಡಿಯು ಅದ್ಭುತ ಹೊಂದಾಣಿಕೆಯ ಆಟ ಪ್ರದರ್ಶಿಸಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿತು.

## ಚೊಚ್ಚಲ ಗ್ರ್ಯಾಂಡ್ ಸ್ಲ್ಯಾಮ್ ಮುಡಿಗೇರಿಸಿಕೊಂಡ ಲಿಂಡಾ ನೊಸ್ಕೋವಾ!



ಲಂಡನ್ : ಆಲ್ ಇಂಗ್ಲೆಂಡ್ ಕ್ಲಬ್‌ನ ಸೆಂಟರ್ ಕೋರ್ಟ್‌ನಲ್ಲಿ ನಡೆದ 2026ರ ವಿಂಬಲ್ಡನ್ ಮಹಿಳಾ ಸಿಂಗಲ್ಸ್ ಫೈನಲ್ ಪಂದ್ಯದಲ್ಲಿ ಜೆಕ್ ಗಣರಾಜ್ಯದ 21 ವರ್ಷದ ಭರವಸೆಯ ಟೆನಿಸ್ ಆಟಗಾರ್ತಿ ಲಿಂಡಾ ನೊಸ್ಕೋವಾ ಐತಿಹಾಸಿಕ ಗೆಲುವು ಸಾಧಿಸಿದ್ದಾರೆ. ಅತ್ಯಂತ ರೋಚಕವಾಗಿ ನಡೆದ ಫೈನಲ್ ಹಣಾಹಣಿಯಲ್ಲಿ ತಮ್ಮದೇ ದೇಶದ ಮತ್ತೊಬ್ಬ ಪ್ರಬಲ ಆಟಗಾರ್ತಿ ಕರೋಲಿನಾ ಮುಚೋವಾ ಅವರನ್ನು 2–1 ಅಂತರದಿಂದ ಮಣಿಸುವ ಮೂಲಕ ನೊಸ್ಕೋ ವಾ ತಮ್ಮ ಚೊಚ್ಚಲ ಗ್ರ್ಯಾಂಡ್ ಸ್ಲ್ಯಾಮ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ.

## ಲೋಕ್ ಅದಾಲತ್‌ನಲ್ಲಿ 3000 ಕೋಟಿ ರೂ. ಪರಿಹಾರ ವಿತರಣೆ




ಬೆಂಗಳೂರು : ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಜುಲೈ 11ರಂದು ರಾಜ್ಯಾದ್ಯಂತ ನಡೆಸಲಾದ ಎರಡನೇ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಒಟ್ಟು 78.79 ಲಕ್ಷ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, 3 ಸಾವಿರ ಕೋಟಿ ರೂ.ಗಳ ಬೃಹತ್ ಪರಿಹಾರ ಮೊತ್ತವನ್ನು ವಿತರಿಸಲಾಗಿದೆ. ಈ ಕುರಿತು ಮಂಗಳವಾರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಪ್ರಾಧಿಕಾರದ ಕಾರ್ಯನಿರ್ವಾ ಹಕ ಅಧ್ಯಕ್ಷೆ, ನ್ಯಾಯಮೂರ್ತಿ ಅನು ಶಿವರಾಮನ್ ಅವರು ಸವಿಸ್ತಾರವಾದ ಮಾಹಿತಿ ನೀಡಿದರು. ಬಾಕಿ ಇದ್ದ 2.54 ಲಕ್ಷ ಹಾಗೂ 76.25 ಲಕ್ಷ ವ್ಯಾಜ್ಯಪೂರ್ವ ಪ್ರಕರಣಗಳು ಸೇರಿದಂತೆ ಒಟ್ಟು 78.79 ಲಕ್ಷ ಕೇಸ್‌ಗಳನ್ನು ಇತ್ಯರ್ಥಗೊಳಿಸಲಾಗಿದೆ ಎಂದರು.

## ಮೀಸಲಾತಿ ದುರುಪಯೋಗ: ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಅಮಾನತು



ಬೆಂಗಳೂರು : ಕರ್ನಾಟಕ ಲೋಕ ಸೇವಾ ಆಯೋಗದ ಇತಿಹಾಸದಲ್ಲೇ ಮೊದಲ ಬಾರಿಗೆ ಹಾಲಿ ಅಧ್ಯಕ್ಷರೊಬ್ಬರು ಭ್ರಷ್ಟಾಚಾರ ಮತ್ತು ಅಕ್ರಮದ ಆರೋಪದ ಮೇಲೆ ಅಮಾನತುಗೊಂಡಿರುವ ಮಹತ್ವದ ಘಟನೆ ನಡೆದಿದೆ. ತಮ್ಮ ಪುತ್ರಿಗೆ ನಿಯಮಬಾಹಿರವಾಗಿ ಸರಕಾರಿ ಹುದ್ದೆ ನೀಡಲು ಅಧಿಕಾರ ದುರುಪಯೋಗಪಡಿಸಿಕೊಂಡ ಆರೋಪದ ಹಿನ್ನೆಲೆಯಲ್ಲಿ ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರನ್ನು ಸೇವೆಯಿಂದ ಅಮಾನತುಗೊಳಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಆದೇಶ ಹೊರಡಿಸಿದ್ದಾರೆ. ಅಧಿಕಾರ ದುರುಪಯೋಗ, ಸ್ವಜನಪಕ್ಷಪಾತ ಮತ್ತು ನಕಲಿ ದಾಖಲೆಗಳ ಸೃಷ್ಟಿ ಆರೋಪದ ಹಿನ್ನೆಲೆಯಲ್ಲಿ ಹಠಾತ್ ಕ್ರಮಕೈಗೊಳ್ಳಲಾಗಿದೆ.

## ಮಹೇಶ್ ಶೆಟ್ಟಿ ತಿಮರೋಡಿಗೆ ಸುಪ್ರೀಂ ಶಾಕ್: ಅರ್ಜಿ ವಜಾ




ಬೆಂಗಳೂರು : ಕರ್ನಾಟಕದಲ್ಲಿ ಭಾರಿ ಕೋಲಾಹಲ ಮೂಡಿಸಿದ ಸೌಜನ್ಯ ಪ್ರಕರಣವನ್ನು ಬಳಸಿಕೊಂಡು ಸಾರ್ವಜನಿಕ ಭಾವನೆಗಳನ್ನು ಕೆರಳಿಸುವ ಪ್ರಯತ್ನ ಮಾಡಿದ ಮಹೇಶ್ ಶೆಟ್ಟಿ ತಿಮರೋಡಿಯನ್ನು ಸುಪ್ರೀಂ ಕೋರ್ಟ್ ತೀವ್ರ ತರಾಟೆಗೆ ತೆಗೆದುಕೊಂಡಿದೆ. ಧರ್ಮಸ್ಥಳ ಹಾಗೂ ಸ್ಥಳೀಯ ದೇವಸ್ಥಾನದ ಪ್ರಮುಖರ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿ ಪ್ರತಿಭಟನೆ ನಡೆಸಿದ್ದ ತಿಮರೋಡಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಾಲಯ ಸಂಪೂರ್ಣವಾಗಿ ವಜಾಗೊಳಿಸಿದೆ. ಯಾವುದೇ ಮಧ್ಯಂತರ ಪರಿಹಾರ ನೀಡಲು ನಿರಾಕರಿಸಿದ ನ್ಯಾಯಾಲಯವು ತಿಮರೋಡಿಯ ಅರ್ಜಿಯನ್ನು ಸಂಪೂರ್ಣವಾಗಿ ವಜಾಗೊಳಿಸಿದೆ.

## ನೆಹರು–ಮೋದಿ ಆಡಳಿತ ಹೋಲಿಕೆ ಮಾಡುತ್ತಿರುವುದು ವಿಪರ್ಯಾಸ: ಸಿದ್ದರಾಮಯ್ಯ



ಬೆಂಗಳೂರು : ಏನೂ ಇಲ್ಲದ ಅಂದಿನ ಭಾರತವನ್ನು ಕಟ್ಟಿದ ನೆಹರು ಎಲ್ಲಿ? ಎಲ್ಲವೂ ಇರುವ ಈಗಿನ ಭಾರತದ ಅಧಿಕಾರ ನಡೆಸುವ ಮೋದಿ ಎಲ್ಲಿ? ಆದರೂ ಅವರಿಬ್ಬರ ಆಡಳಿತವನ್ನು ಹೋಲಿಕೆ ಮಾಡುವ ಕೆಲಸ ನಡೆಯುತ್ತಿರುವುದು ವಿಪರ್ಯಾಸ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬೇಸರ ವ್ಯಕ್ತಪಡಿಸಿದ್ದಾರೆ. ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಅವರ ಆಡಳಿತಕ್ಕೂ ಈಗಿನ ಪ್ರಧಾನಿ ಮೋದಿ ಅವರ ಆಡಳಿತಕ್ಕೂ ಹೋಲಿಕೆ ಮಾಡಲು ಸಾಧ್ಯವೇ ಇಲ್ಲ, ನೆಹರು ಪ್ರಧಾನಿ ಆಗಿದ್ದಾಗ ಭಾರತದಲ್ಲಿ ಒಂದು ಹೊತ್ತಿನ ಊಟಕ್ಕೂ ಪರಿತಪಿಸುವ ಕಡುಬಡತನವಿತ್ತು ಎಂದು ಪ್ರತಿಪಾದಿಸಿದರು.

## ಭವಿಷ್ಯದಲ್ಲಿ ರಾಜ್ಯ ರಾಜಕಾರಣಕ್ಕೆ – ಹೆಚ್‌ಡಿಕೆ



ಬೆಂಗಳೂರು : ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ರಾಜ್ಯ ರಾಜಕಾರಣಕ್ಕೆ ಮರಳುವ ಕುರಿತ ಚರ್ಚೆಗಳಿಗೆ ತಾವೇ ಸ್ವತಃ ತೆರೆ ಎಳೆದಿದ್ದು, ಭವಿಷ್ಯದಲ್ಲಿ ಕರ್ನಾಟಕ ರಾಜಕಾರಣಕ್ಕೆ ವಾಪಸ್ ಬರುವ ಸ್ಪಷ್ಟ ಮುನ್ಸೂಚನೆ ನೀಡಿದ್ದಾರೆ. ತಕ್ಷಣವೇ ತಾವು ಮರಳುತ್ತಿಲ್ಲ ಎಂದು ಸ್ಪಷ್ಟಪಡಿಸಿದ ಅವರು, ಸದ್ಯಕ್ಕೆ ಕೇಂದ್ರ ಸಚಿವನಾಗಿ ಮೂರು ವರ್ಷಗಳ ಅಧಿಕಾರಾವಧಿ ಬಾಕಿ ಇದೆ ಎಂದರು. ಕೇಂದ್ರದ ಜವಾಬ್ದಾರಿಯನ್ನು ನಿಭಾಯಿಸುತ್ತಲೇ ರಾಜ್ಯದಲ್ಲಿ ಜೆಡಿಎಸ್ ಪಕ್ಷ ಸಂಘಟನೆ ಮಾಡುವುದಾಗಿ ತಿಳಿಸಿದ ಅವರು, ಕೇಂದ್ರ ಮತ್ತು ರಾಜ್ಯ ಎರಡೂ ಕಡೆಗಳಲ್ಲಿ ತಾವು ಸಕ್ರಿಯವಾಗಿ ಕೆಲಸ ಮಾಡುವುದಾಗಿ ಹೇಳಿದ್ದಾರೆ.

## ನೌಕರರ ಒಪಿಎಸ್ ಮರುಜಾರಿ ಬೇಡಿಕೆಗೆ ಸಿಎಂ ಸಕಾರಾತ್ಮಕ ಸ್ಪಂದನೆ




ಬೆಂಗಳೂರು : ರಾಜ್ಯದ ಸರ್ಕಾರಿ ನೌಕರರಿಗೆ ಒಪಿಎಸ್ ಯನ್ನು ಮರು ಜಾರಿಗೊಳಿಸುವುದು ಹಾಗೂ ವೇತನ ಮತ್ತು ಭತ್ಯೆಗಳನ್ನು ನೀಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ಸರ್ಕಾರದ ಮುಂದೆ ಮಹತ್ವದ ಬೇಡಿಕೆಯನ್ನಿಟ್ಟಿದೆ. ನೌಕರರ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, "ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಣಾಳಿಕೆಯಲ್ಲಿ ಸರ್ಕಾರಿ ನೌಕರರ ಎನ್‌ಪಿಎಸ್ ರದ್ದುಪಡಿಸಿ, ಹಳೆಯ ಪಿಂಚಣಿ ಯೋಜನೆ (ಒಪಿಎಸ್) ಮರುಜಾರಿಗೊಳಿಸುವ ಭರವಸೆ ನೀಡಲಾಗಿತ್ತು. ನುಡಿದಂತೆ ನಡೆಯಲು ನಮ್ಮ ಸರ್ಕಾರ ಬದ್ಧವಾಗಿದೆ," ಎಂದು ಆಶ್ವಾಸನೆ ನೀಡಿದರು.

## ಸೋನಮ್ ವಾಂಗ್‌ಚುಕ್ ಉಪವಾಸ ಸತ್ಯಾಗ್ರಹ 14ನೇ ದಿನಕ್ಕೆ..!



ನವದೆಹಲಿ: ದೇಶದಲ್ಲಿ ಇತ್ತೀಚೆಗೆ ನಡೆದ ಪರೀಕ್ಷಾ ಅಕ್ರಮಗಳು ಮತ್ತು ಪೇಪರ್ ಲೀಕ್ ದಂಧೆಯನ್ನು ವಿರೋಧಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ಹಮ್ಮಿಕೊಳ್ಳಲಾಗಿರುವ ಬೃಹತ್ ಪ್ರತಿಭಟನೆ ಈಗ ಇಡೀ ದೇಶದ ಗಮನ ಸೆಳೆದಿದೆ. ಕಾಕ್ರೋಚ್ ಜನತಾ ಪಕ್ಷ ನೇತೃತ್ವದಲ್ಲಿ ನಡೆಯುತ್ತಿರುವ ಈ ಹೋರಾಟ ಯಶಸ್ವಿಯಾಗಿ 22ನೇ ದಿನಕ್ಕೆ ಕಾಲಿಟ್ಟಿದೆ. ಈ ಆಂದೋಲನಕ್ಕೆ ಜೂನ್ 28 ರಂದು ಕೈಜೋಡಿಸಿದ ಖ್ಯಾತ ಶಿಕ್ಷಣತಜ್ಞ ಹಾಗೂ ಹವಾಮಾನ ಕಾರ್ಯಕರ್ತ ಸೋನಮ್ ವಾಂಗ್‌ಚುಕ್ ಅವರ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹವು ಇದೀಗ 14ನೇ ದಿನಕ್ಕೆ ತಲುಪಿದ್ದು ಆರೋಗ್ಯ ಹದಗೆಡುತ್ತಿದೆ ಎಂದು ವರದಿಯಾಗಿದೆ.

## ದೇಣಿಗೆ ಕೊರತೆ ಅಯೋಧ್ಯೆಯ ಧನ್ನಿಪುರ ಮಸೀದಿ ಯೋಜನೆ ವಿಸ್ತೀರ್ಣ ಕಡಿತ



ಲಕ್ನೋ : 2019ರ ಐತಿಹಾಸಿಕ ಶ್ರೀ ರಾಮ ಜನ್ಮಭೂಮಿ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ನೀಡಿದ ತೀರ್ಪಿನ ಅನ್ವಯ, ಅಯೋಧ್ಯೆಯಲ್ಲಿ ಬಾಬ್ರಿ ಮಸೀದಿ ಪುನರ್ ನಿರ್ಮಾಣಕ್ಕಾಗಿ ಹಂಚಿಕೆಯಾಗಿದ್ದ 5ಎಕರೆ ಜಾಗದಲ್ಲಿ ಉದ್ದೇಶಿತ ಬೃಹತ್ ಯೋಜನೆಗೆ ಈಗ ತೀವ್ರ ಆರ್ಥಿಕ ಹಿನ್ನಡೆಯಾಗಿದೆ. ಮುಸ್ಲಿಂ ಸಮುದಾಯದಿಂದ ನಿರೀಕ್ಷಿತ ಮಟ್ಟದಲ್ಲಿ ದೇಣಿಗೆ ಹರಿದುಬರದ ಕಾರಣ, ಈ ಹಿಂದೆ ಯೋಜಿಸಲಾಗಿದ್ದ ಬೃಹತ್ ಇಸ್ಲಾಮಿಕ್ ಸಂಕೀರ್ಣದ ಬದಲಿಗೆ ಕೇವಲ ಒಂದು ಸಾಧಾರಣ ಹಾಗೂ ಚಿಕ್ಕ ಮಸೀದಿಯನ್ನು ಮಾತ್ರ ನಿರ್ಮಿಸಲು ಮುಸ್ಲಿಂ ಟ್ರಸ್ಟ್ ನಿರ್ಧರಿಸಿದೆ ಎಂದು ಜಾಗತಿಕ ಸುದ್ದಿಸಂಸ್ಥೆ 'ರಾಯಿಟರ್ಸ್' ವರದಿ ಮಾಡಿದೆ.

## ಇಂಗ್ಲಿಷ್ ಭಾರತದ ಸ್ಥಳೀಯ ಭಾಷೆಯೇ: ಸುಪ್ರೀಂ ಕೋರ್ಟ್ ಪ್ರಶ್ನೆ




ನವದೆಹಲಿ : ರಾಷ್ಟ್ರೀಯ ಶಿಕ್ಷಣ ನೀತಿ ಅಡಿಯಲ್ಲಿ ಜಾರಿಗೆ ತರಲಾಗಿರುವ ಮೂರು–ಭಾಷಾ ನೀತಿಯ ಅನುಷ್ಠಾನವನ್ನು ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿಗಳ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, 'ಇಂಗ್ಲಿಷ್ ಅನ್ನು ಭಾರತದ ಸ್ಥಳೀಯ ಭಾಷೆ ಎಂದು ಪರಿಗಣಿಸಬಹುದೇ?' ಎಂಬ ಮಹತ್ವದ ಪ್ರಶ್ನೆಯನ್ನು ಎತ್ತಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹಾಗೂ ನ್ಯಾಯಮೂರ್ತಿ ಜೆ. ಜೋಯ್‌ಮಲ್ಯ ಬಾಗ್ಚಿ ಅವರಿದ್ದ ಪೀಠವು, ನೀತಿಯಲ್ಲಿ ಬಳಸಲಾಗಿರುವ "ಸ್ಥಳೀಯ ಭಾರತೀಯ ಭಾಷೆ" ಎಂಬ ಪದಪ್ರಯೋಗವನ್ನು ಮರುಪರಿಶೀಲಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟಿದೆ.

## ತಮಿಳುನಾಡಿನಲ್ಲಿ ಗೋಹತ್ಯೆ ನಿಷೇಧ ಆದೇಶಕ್ಕೆ ಸುಪ್ರೀಂ ಕೋರ್ಟ್ ತಡೆ



ತಮಿಳುನಾಡು: ಹಸು ಮತ್ತು ಕರುಗಳ ಹತ್ಯೆಯನ್ನು ಸಂಪೂರ್ಣವಾಗಿ ನಿಷೇಧಿಸಿ ಮದ್ರಾಸ್ ಹೈಕೋರ್ಟ್ ನೀಡಿದ್ದ ಆದೇಶಕ್ಕೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ. ಮುಖ್ಯಮಂತ್ರಿ ವಿಜಯ್ ನೇತೃತ್ವದ ಟಿವಿಕೆ (ತಮಿಳಗ ವೆಟ್ರಿ ಕಳಗಂ) ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಾಲಯವು ಈ ಮಧ್ಯಂತರ ಆದೇಶ ಹೊರಡಿಸಿದೆ. ಹೈಕೋರ್ಟ್ ತೀರ್ಪಿನ ಕೊನೆಯ ಪ್ಯಾರಾಗ್ರಾಫ್‌ನಲ್ಲಿರುವ ನಿರ್ದೇಶನಗಳು ಕಾನೂನಾತ್ಮಕವಾಗಿ "ತಿದ್ದುಪಡಿ"ಗೆ ಅರ್ಹವಾಗಿವೆ ಎಂದು ಸುಪ್ರೀಂ ಪೀಠ ಅಭಿಪ್ರಾಯಪಟ್ಟಿದೆ. ಈ ಪ್ರಕರಣದಲ್ಲಿ ತಮಿಳುನಾಡು ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ಬಲವಾದ ವಾದ ಮಂಡಿಸಿತ್ತು.

## ಭದ್ರತೆಗೆ ಮೊದಲ ಆದ್ಯತೆ – ಸುವೇಂದು ಅಧಿಕಾರಿ



ಕೋಲ್ಕತ್ತಾ : ಕೋಲ್ಕತ್ತಾದ ನೇತಾಜಿ ಸುಭಾಷ್ ಚಂದ್ರ ಬೋಸ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಆವರಣದಲ್ಲಿರುವ ಮಸೀದಿಯಲ್ಲಿ ಸಾಮೂಹಿಕ ಪ್ರಾರ್ಥನೆಗಾಗಿ ನೀಡಲಾಗುತ್ತಿದ್ದ ಪ್ರವೇಶ ಪಾಸ್‌ಗಳನ್ನು ರದ್ದುಗೊಳಿಸಿರುವ ವಿವಾದಕ್ಕೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳ ಸರ್ಕಾರ ತನ್ನ ನಿಲುವನ್ನು ಸ್ಪಷ್ಟಪಡಿಸಿದೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರು, ಭೌಗೋಳಿಕ ಮತ್ತು ರಾಜಕೀಯವಾಗಿ ಅತ್ಯಂತ ಸೂಕ್ಷ್ಮ ಹಾಗೂ ಪ್ರಮುಖವಾಗಿರುವ ಇಂತಹ ಉನ್ನತ ಭದ್ರತಾ ವಲಯದ ಬಾಗಿಲುಗಳನ್ನು ಹೊರಗಿನವರಿಗಾಗಿ ಮುಕ್ತವಾಗಿಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.



ಕರಾವಳಿ ತರಂಗಿಣಿ
# ಕಲಾ ತರಂಗಿಣಿ



## ಜುಲೈ 17ರಂದು ಚಿತ್ರಮಂದಿರಗಳಲ್ಲಿ 'ಫಾದರ್ಸ್ ಡೇ'

ELEVEN ELEMENTS ಸಂಸ್ಥೆ ಲಾಂಛನದಲ್ಲಿ ರಾಜಾರಾಮ್ ರಾಜೇಂದ್ರನ್ ನಿರ್ಮಾಣದ ಜೊತೆಗೆ ನಿರ್ದೇಶನವನ್ನೂ ಮಾಡಿರುವ ಚಿತ್ರ 'ಫಾದರ್ಸ್ ಡೇ'. ತಂದೆ – ಮಗನ ಬಾಂಧವ್ಯ ಸಾರುವ ಈ ಚಿತ್ರ ಇದೇ ಜುಲೈ 17ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಇದೊಂದು ಕನ್ನಡದ ಮೊದಲ ಬೈಕ್ ರೈಡರ್ ಚಿತ್ರವಾಗಿದೆ. ಚಿತ್ರ ಬಿಡುಗಡೆಗೂ ಪೂರ್ವದಲ್ಲಿ ALL OK ಸಾರಥ್ಯದಲ್ಲಿ ಮೂಡಿಬಂದಿರುವ ಪ್ರಮೋಷನ್ ಸಾಂಗ್ ಅನ್ನು ಚಿತ್ರತಂಡ ಅನಾವರಣ ಮಾಡಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. 'ಫಾದರ್ಸ್ ಡೇ' ಕನ್ನಡದ ಮೊದಲ ಬೈಕರ್ ಚಿತ್ರವಾಗಿದೆ. ಇದು ಒಂದು ದಿನದಲ್ಲಿ ನಡೆಯುವ ಕಥೆ. ಅಪ್ಪ – ಮಗನ ಬಾಂಧವ್ಯದ ಕಥೆಯೂ ಹೌದು. ಸಹ ಪಯಣಿಗರು ಅಪ್ಪ–ಮಗ ಎಂದು ನೋಡುಗರಿಗೆ ತಿಳಿದಿರುತ್ತದೆ. ಆದರೆ ಅವರಿಗೆ ಅದು ಗೊತ್ತಿರುವುದಿಲ್ಲ. ಇದರ ಜೊತೆಗೆ ಯಾರು ನಿರೀಕ್ಷಿಸದ ಕ್ಲೈಮ್ಯಾಕ್ಸ್ ಸಹ ಈ ಚಿತ್ರದಲ್ಲಿದೆ. ಅದೇ ಚಿತ್ರದ ವಿಶೇಷ. ಇನ್ನೂ ಈ ಚಿತ್ರಕ್ಕೆ ಡಬ್ಬಿಂಗ್ ಮಾಡಿಲ್ಲ. ಚಿತ್ರೀಕರಣ ನಡೆಯುವಾಗ ಆಡಿದ ನೈಜ ಸಂಭಾಷಣೆಯನ್ನೇ ಬಳಸಿಕೊಳ್ಳಲಾಗಿದೆ. ಅಜಿತ್ ಹಂಡೆ ಹಾಗೂ ಹರ್ಷಿಲ್ ಕೌಶಿಕ್ ಅಪ್ಪ–ಮಗನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಸಾಮ್ರಾಜ್ಞಿ ರಾಜನ್, ALL OK, ಕ್ಷೇಮ ಶೆಟ್ಟಿ ಮುಂತಾದವರು ತಾರಾಬಳಗದಲ್ಲಿದ್ದಾರೆ. ಸಾಮ್ರಾಜ್ಞಿ ಅವರು ಸಹ ಬೈಕ್ ರೈಡಿಂಗ್ ಮಾಡಿದ್ದಾರೆ. ಸೆನ್ಸಾರ್ ಮಂಡಳಿ U/A 7+ ಪ್ರಮಾಣ ಪತ್ರ ನೀಡಿದೆ. ಜುಲೈ 17 ಚಿತ್ರ ತೆರೆಗೆ ಬರುತ್ತಿದೆ. 'ಫಾದರ್ಸ್ ಡೇ' ದಿನ ಬಿಡುಗಡೆಯಾಗಿದ್ದ ಟ್ರೇಲರ್‌ಗೆ ಪ್ರಶಂಸೆ ದೊರಕಿದೆ. ಚಿತ್ರ ಬಿಡುಗಡೆಗೂ ಮುಂಚೆ ಪ್ರಮೋಷನ್ ಸಾಂಗ್ ಅನಾವರಣವಾಗಿದೆ. ಮಕ್ಕಳಿಂದ ಹಿರಿಯರ ತನಕ ನೋಡಬಹುದಾದ ಮನೋರಂಜನೆಯ ಚಿತ್ರ ಇದಾಗಿದೆ ಎಂದು ಚಿತ್ರದ ನಿರ್ದೇಶಕ. ರಾಜಾರಾಮ್ ರಾಜೇಂದ್ರನ್ ತಿಳಿಸಿದರು.



## ಲೂಸ್ ಮಾದ ಯೋಗಿ ಅಭಿನಯದ 'ಫಾರೆವರ್'ಗೆ ಚಾಲನೆ

ತಮ್ಮ ಅಮೋಘ ಅಭಿನಯದ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ಲೂಸ್ ಮಾದ ಯೋಗಿ ಅಭಿನಯದ 51ನೇ ಚಿತ್ರ 'ಫಾರೆವರ್'. ಸುಪ್ರೀಮ್ ಕ್ರಿಯೇಷನ್ಸ್ ಲಾಂಛನದಲ್ಲಿ ಎಂ.ವೆಂಕಟನಾರಾಯಣ್ (ಠಾಗೋರ್ ಕೃಷ್ಣ) ನಿರ್ಮಾಣದ 'ಚಂದ್ರಿಕ' ಖ್ಯಾತಿಯ ಯೋಗೇಶ್ ಎಂ ನಿರ್ದೇಶಿಸುತ್ತಿರುವ 'ಫಾರೆವರ್' ಚಿತ್ರದ ಮುಹೂರ್ತ ಸಮಾರಂಭ ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. ಚಿತ್ರದ ಮೊದಲ ಸನ್ನಿವೇಶಕ್ಕೆ ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ಆರಂಭ ಫಲಕ ತೋರಿದರು. ಶಾಸಕ ಕೃಷ್ಣಪ್ಪ ಅವರು ಕ್ಯಾಮೆರಾ ಚಾಲನೆ ಮಾಡಿದರು. 'ನಾಗರಹಾವು' ಚಿತ್ರದ ನಿರ್ಮಾಪಕ ಸಾಜಿದ್ ಖುರೇಶಿ ಫಸ್ಟ್ ಲುಕ್ ಪೋಸ್ಟರ್ ಅನಾವರಣ ಮಾಡಿದರು. ಗಣ್ಯರೆಲ್ಲರು ಸೇರಿ ಟ್ಯಾಂಕರ್ ಮೇಲಿದ್ದ ಶೀರ್ಷಿಕೆಯನ್ನು ಅನಾವರಣ ಮಾಡಿದ್ದು ವಿಶೇಷವಾಗಿತ್ತು. ಚಿತ್ರರಂಗ ಸಾಕಷ್ಟು ಗಣ್ಯರು ಹಾಗೂ ಸಹಸ್ರಾರು ಅಭಿಮಾನಿಗಳು ಈ ಸುಂದರ ಸಮಾರಂಭಕ್ಕೆ ಸಾಕ್ಷಿಯಾದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಾನು ಹಾಗೂ ಧ್ರುವ ಸರ್ಜಾ ಒಂದೇ ಸ್ಕೂಲ್‌ನಲ್ಲಿ ಓದಿದವರು. ಮೆಚ್ಚಿನ ಗೆಳೆಯ ಅವರು. ಅವರು ಬಂದು ನಮ್ಮ ಚಿತ್ರಕ್ಕೆ ಕ್ಲಾಪ್ ಮಾಡಿದ್ದು ಖುಷಿಯಾಗಿದೆ. ಸುಮಾರು ಎರಡು ವರ್ಷಗಳ ನಂತರ ನಾನು ನಾಯಕನಾಗಿ ನಟಿಸುತ್ತಿರುವ ಚಿತ್ರದ ಮುಹೂರ್ತ ನಡೆಯುತ್ತಿದೆ. ಬಹಳ ಅದ್ದೂರಿಯಾಗಿಯೇ ನಡೆದಿದೆ. ಚಿತ್ರ ಕೂಡ ಇಷ್ಟೇ ಅದ್ದೂರಿಯಾಗಿರುತ್ತದೆ. ನಿರ್ದೇಶಕರು ಒಂದೊಳ್ಳೆ ಕಥೆ ಬರೆದಿದ್ದಾರೆ. ನಾನು ಈವರೆಗೂ ಮಾಡಿರದ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆ. ಫಸ್ಟ್ ಲುಕ್ ಪೋಸ್ಟರ್ ತುಂಬಾ ಚೆನ್ನಾಗಿದೆ. ಈ ಚಿತ್ರದಲ್ಲಿ ಲವ್, ಸೆಂಟಿಮೆಂಟ್, ಆಕ್ಷನ್ ಅಲ್ಲದೆ ಮತ್ತೊಂದು ಇದೆ. ಅದನ್ನು ಮುಂದಿನ ದಿನಗಳಲ್ಲಿ ಹೇಳುತ್ತೇವೆ. ನಾನು ತುಂಬಾ ಬೈಕ್ ಇಷ್ಟ ಪಡುತ್ತೇನೆ. ಬೈಕ್ ರೈಡರ್ ಕೂಡ. ಈ ಕಥೆ ಅದಕ್ಕೆ ಹತ್ತಿರವಾಗಿರುವುದು ಮತ್ತಷ್ಟು ಇಷ್ಟವಾಯಿತು ಎಂದರು.



## ಮಿಸ್ಟರ್ ಅಂಡ್ ಮಿಸಸ್ ರಾಜಾಹುಲಿ ಆಡಿಯೋ ಸಚಿವ ರಾಮಲಿಂಗಾ ರೆಡ್ಡಿ ಬಿಡುಗಡೆ

ರಾಕಿಂಗ್ ಸ್ಟಾರ್ ಯಶ್ ಅಭಿನಯದ ರಾಜಾಹುಲಿ ಚಿತ್ರಕ್ಕೆ ಅಸಿಸ್ಟೆಂಟ್ ಆಗಿ ಕೆಲಸ ಮಾಡಿದ್ದ ಹೊನ್ನರಾಜ್ ನಾಯಕ ಕಮ್ ನಿರ್ದೇಶಕನಾಗಿದ್ದಾರೆ. ಅವರೇ ಕಥೆ, ಚಿತ್ರಕಥೆ ಬರೆದು ಮೊದಲಬಾರಿಗೆ ಆಕ್ಷನ್‌ಕಟ್ ಹೇಳಿರುವ 'ಮಿಸ್ಟರ್ ಅಂಡ್ ಮಿಸಸ್ ರಾಜಾಹುಲಿ' ಚಿತ್ರದ ಆಡಿಯೋ ಬಿಡುಗಡೆ ಸಮಾರಂಭ ಕಲಾವಿದರ ಸಂಘದಲ್ಲಿ ನೆರವೇರಿತು. ಸಚಿವ ರಾಮಲಿಂಗಾರೆಡ್ಡಿ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರೆ, ಲವ್ಲಿಸ್ಟಾರ್ ಪ್ರೇಮ್ ಸಾಂಗ್ ರಿಲೀಸ್ ಮಾಡಿದರು. ನಿರ್ಮಾಪಕರ ಸಂಘದ ಎಂ.ಜಿ.ರಾಮಮೂರ್ತಿ ನಿರ್ಮಾಪಕ ಸಾ ರಾ. ಗೋವಿಂದು, ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ವೇದಿಕೆಯಲ್ಲಿ ಮಾತನಾಡಿದ ಸಚಿವ ರಾಮ ಲಿಂಗಾರೆಡ್ಡಿ ಹೊನ್ನರಾಜ್ ಈ ಚಿತ್ರದಲ್ಲಿ ನಟನೆ, ನಿರ್ದೇಶನದ ಜತೆ ಚಿತ್ರ ನಿರ್ಮಾಣ ಸಹ ಮಾಡಿದ್ದಾರೆ. ಸಿನಿಮಾ ಚೆನ್ನಾಗಿ ಪ್ರದರ್ಶನಗೊಂಡು ಹಾಕಿದ ಹಣದ 4ರಷ್ಟು ವಾಪಸ್ ಬರಲಿ ಎಂದು ಶುಭ ಹಾರೈಸಿದರು. ನಟ ಪ್ರೇಮ್ ಮಾತನಾಡಿ ಹೊನ್ನರಾಜ್ ನನಗೆ ಜೂನಿಯರ್, ಆಗ ಚಾಮರಾಜ್ ಮಾಸ್ಟರ್ ನಮಗೆಲ್ಲ ಗುರುಗಳು, ಸಿನಿಮಾ ನಿರ್ಮಾಣ ಮಾಡಿದ್ದಾರೆ. ಅವರಿಗೆ ಒಳ್ಳೆ ಫಲ ಸಿಗಲಿ ಎಂದು ಹಾರೈಸಿದರು. ಸಾರಾ ಗೋವಿಂದು ಮಾತನಾಡಿ ಸಿರಿವಂತ ರಾಜಕಾರಣಿ ಕೈಲಿ ಸಾಂಗ್ ಲಾಂಚ್ ಮಾಡಿಸಿದ್ದೀರಿ, ಸಚಿವರ ಕೈಗುಣ ಚೆನ್ನಾಗಿದೆ. ನಾವೆಲ್ಲ ನಿಮ್ಮ ಬೆನ್ನೆಲುಬಾಗಿರುತ್ತೇವೆ, ರಿಲೀಸ್ ಸಮಯದಲ್ಲಿ ನಿಮ್ಮ ಜತೆ ಇರುತ್ತೇವೆ ಎಂದರು. ಈ ಸಂದರ್ಭದಲ್ಲಿ ನಾಯಕ, ನಿರ್ದೇಶಕ ಹೊನ್ನರಾಜ್ ಮಾತನಾಡುತ್ತ ಇದೊಂದು ಹಳ್ಳಿ ಸೊಗಡಿನ ಚಿತ್ರ. ಯಶ್ ಅಭಿಮಾನಿಯಾದ ನಾಯಕ ಸ್ನೇಹಕ್ಕೆ ಹೆಚ್ಚು ಬೆಲೆ ಕೊಡುವವನು, ಸಮಾಜಸೇವೆ ಅಂತ ಹಳ್ಳಿಗೆ ಒಳ್ಳೆಯದನ್ನು ಮಾಡಲು ಹೋಗಿ ಆತ ಏನೆಲ್ಲ ತೊಂದರೆ ಅನುಭವಿಸುತ್ತಾನೆ ಎಂಬುದನ್ನು ಫ್ಯಾಮಿಲಿ ಎಂಟರ್ ಟೈನರ್ ಕಥೆಯೊಂದಿಗೆ ಹೇಳಲು ಪ್ರಯತ್ನಿಸಿದ್ದೇನೆ. ಚಿತ್ರದ ನಾಯಕಿ ಶೃತಿ ಬಬಿತ ಬಜಾರಿ ಹುಡುಗಿಯಾಗಿ ಕಾಣಿಸಿಕೊಂಡಿದ್ದಾರೆ ಎಂದರು.



## ಮ್ಯಾರೇಜ್ ಪಾರ್ಟಿ ಚಿತ್ರದ ಫಸ್ಟ್ ಲುಕ್ ಬಿಡುಗಡೆ !

ಯುವ ನಿರ್ದೇಶಕ ಚಯನ್ ಶೆಟ್ಟಿ ನಿರ್ದೇಶನ ಹಾಗೂ ಶ್ರೀ ವಾರಾಹಿ ಫಿಲಂಸ್ ಬ್ಯಾನರಿನಡಿಯಲ್ಲಿ ಸಂತೋಷ್ ವಿ ನಿರ್ಮಾಣ ಮಾಡಿರುವ 'ಮ್ಯಾರೇಜ್ ಪಾರ್ಟಿ' ಚಿತ್ರವೀಗ ಪ್ರೇಕ್ಷಕರನ್ನು ಮುಖಾಮುಖಿಯಾಗುವ ಸನಿಹದಲ್ಲಿದೆ. ಇದೇ ಹೊತ್ತಿನಲ್ಲಿ ಚಿತ್ರತಂಡ ಫಸ್ಟ್ ಲುಕ್ ಪೋಸ್ಟರ್ ಅನ್ನು ಬಿಡುಗಡೆಗೊಳಿಸಿದೆ. ಸಿನಿಮಾದ ಆಂತರ್ಯವನ್ನು ತೆರೆದಿಡುವಂತೆ ಕಾಣಿಸುವ ಈ ಪೋಸ್ಟರ್ ಮೂಲಕ ಮ್ಯಾರೇಜ್ ಪಾರ್ಟಿ ಪ್ರೇಕ್ಷಕರನ್ನು ಸೆಳೆದುಕೊಳ್ಳುತ್ತಿದೆ. ಈ ಹಿಂದೆ ಬಿಗ್ ಬಸ್ ಖ್ಯಾತಿಯ ರೂಪೇಶ್ ಶೆಟ್ಟಿ ನಾಯಕನಾಗಿ ನಟಿಸಿದ್ದ ಅಧಿಪತ್ರ ಚಿತ್ರವನ್ನು ನಿರ್ದೇಶನ ಮಾಡಿದ್ದವರು ಚಯನ್ ಶೆಟ್ಟಿ. ಆ ಚಿತ್ರಕ್ಕೆ ಪ್ರೇಕ್ಷಕರ ಕಡೆಯಿಂದ ಸಕಾರಾತ್ಮಕ ಪ್ರತಿಕ್ರಿಯೆ ಸಿಕ್ಕಿತ್ತು. ಅದಾದ ನಂತರ ಎರಡನೇ ಚಿತ್ರದ ವಿಚಾರದಲ್ಲಿ ಸಂಪೂರ್ಣವಾಗಿ ಭಿನ್ನ ಪಥದತ್ತ ಚಯನ್ ಹೊರಳಿಕೊಂಡಿದ್ದಾರೆ. ಅದರ ಫಲವಾಗಿಯೇ ಗಟ್ಟಿ ಕಥೆಯೊಂದಿಗೆ, ಹಾಸ್ಯ ಪ್ರಧಾನವಾಗಿರುವ ಮ್ಯಾರೇಜ್ ಪಾರ್ಟಿ ಚಿತ್ರ ರೂಪುಗೊಂಡಿದೆ. ಈಗಾಗಲೇ ಒಂದಷ್ಟು ತುಳು ಸಿನಿಮಾಗಳಲ್ಲಿ ನಟಿಸುವ ಮೂಲಕ ಗಮನ ಸೆಳೆದಿರುವ ವಿನೀತ್ ಕುಮಾರ್ ಮ್ಯಾರೇಜ್ ಪಾರ್ಟಿ ಮೂಲಕ ನಾಯಕನಾಗಿ ಬಡ್ತಿ ಪಡೆದಿದ್ದಾರೆ. ಕರಾವಳಿ ಭಾಗದಲ್ಲಿ ಘಟಿಸುವ ರಸವತ್ತಾದ ಕಥಾನಕದೊಂದಿಗೆ ಮ್ಯಾರೇಜ್ ಪಾರ್ಟಿ ಬಿಡುಗಡೆಗೆ ಅಣಿಗೊಂಡಿದೆ. ಶ್ರೀಕಾಂತ್ ಛಾಯಾ ಗ್ರಹಣ, ರಿತ್ವಿಕ್ ಮುರಳೀಧರ್ ಸಂಗೀತ, ಸುಪ್ರಂಸೋ ಖ್ಯಾತಿಯ ನಿತಿನ್ ಶೆಟ್ಟಿ ಸಂಕಲನ, ಪ್ರಮೋದ್ ಮರವಂತೆ ಮತ್ತು ತ್ರಿಲೋಕ್ ಸಾಹಿತ್ಯ, ಪ್ರಕಾಶ್ ತುಮಿನಾಡು, ದೀಪಕ್ ರೈ, ನವೀನ್ ಡಿ ಪಡೀಲ್, ರಕ್ಷಿತಾ, ನಮಿತಾ ಕಿರಣ್, ರಾಮ್‌ದಾಸ್, ರಘು ಪಾಂಡೇಶ್ವರ, ಪುಷ್ಪರಾಜ್ ಬೋಳಾರ್, ಜ್ಯೋತಿಷ್ ಶೆಟ್ಟಿ ಮುಂತಾದವರು ತಾರಾಗಣದಲ್ಲಿದ್ದಾರೆ.



## 'ಅತಿಕಾಯ' ಅಡ್ಡದಲ್ಲಿ ತ್ರಿಭಾಷಾ ತಾರೆ

ರಂಗಿ ತರಂಗ ಖ್ಯಾತಿಯ ನಿರೂಪ್ ಭಂಡಾರಿ 'ಅತಿಕಾಯ'ನ ಅವತಾರದಲ್ಲಿ ಕಾಣಿಸಿಕೊಳ್ಳುತ್ತಿರುವ ವಿಷಯ ಈಗಾಗಲೇ ತಿಳಿದಿದೆ. ಹೊಸ ಸುದ್ದಿ ಏನೆಂದರೆ, ನಿರೂಪ್ ಜೋಡಿಯಾಗಿ ಸ್ವಾತಿಷ್ಟ ಕೃಷ್ಣನ್ ನಟಿಸುತ್ತಿದ್ದಾರೆ. ಮೂಲತಃ ಧಾರವಾಡದವರಾದ ಸ್ವಾತಿಷ್, ಕನ್ನಡ, ತಮಿಳು ಹಾಗೂ ತೆಲುಗಿನಲ್ಲಿ ಖ್ಯಾತಿ ಗಳಿಸಿದ್ದಾರೆ. ತಮಿಳಿನ ಸವರಕತ್ತಿ, ವಿಕ್ರಮ್, ತೆಲುಗಿನ ಗುಂಡೇ ಕಥಾ ವಿಂಟಾರ ಹಾಗೂ ಕನ್ನಡದ ಒಂದು ಸರಳ ಪ್ರೇಮಕಥೆ, ರಕ್ಕಸಪುರದೋಳ್ ಮೊದಲಾದ ಸಿನಿಮಾಗಳಲ್ಲಿ ಅಭಿನಯಿಸಿ ಸೈಎನ್ನಿಸಿಕೊಂಡಿರುವ ಸ್ವಾತಿಷ್ಟ, ಇದೀಗ 'ಅತಿಕಾಯ' ಅಡ್ಡದಲ್ಲಿ ಮಿಂಚು ಹರಿಸಲು ಸಜ್ಜಾಗಿದ್ದಾರೆ. ಈವರೆಗೂ ಚಾಕೋಲೆಟ್ ಬಾಯ್, ಲವರ್ ಬಾಯ್ ಗೆಟಪ್‌ನಲ್ಲಿ ಕಂಗೊಳಿಸುತ್ತಿದ್ದ ನಿರೂಪ್ ಭಂಡಾರಿ, ಇದೀಗ ಸಖತ್ ರಗಡ್ ಲುಕ್‌ನಲ್ಲಿ ಎಂಟ್ರಿ ಕೊಟ್ಟಿದ್ದಾರೆ. ರಕ್ತಸಿಕ್ತ ಧಿರಿಸಿನಲ್ಲಿ ಕ್ಯಾಮೆರಾ ಎದುರಿಸಿದ್ದಾರೆ. ಅಂದ ಹಾಗೆ ಅವರೀಗ 'ಅತಿಕಾಯ'ನ ಅವತಾರದಲ್ಲಿ ದರ್ಶನ ಕೊಡಲು ಸಜ್ಜಾಗಿದ್ದಾರೆ. ಪಕ್ಕಾ ಮಾಸ್ ಕಥೆಯಲ್ಲಿ ಅವರು ರಗಡ್ ಆಗಿ ಕಾಣಿಸಿಕೊಳ್ಳುವ ಮೂಲಕ ಬೇರೆ ರೀತಿಯ ಲುಕ್‌ಗೆ ಹೊಂದಿಕೊಂಡಿದ್ದಾರೆ.



## 'ನಾರಿ' ಚಿತ್ರಕ್ಕೆ ಅದ್ದೂರಿ ಮುಹೂರ್ತ

ಆರ್.ಕೆ.ಗೋಲ್ಡನ್ ಮೂವಿ ಪ್ರೊಡಕ್ಷನ್ಸ್ ಲಾಂಛನದಲ್ಲಿ ಮುನಿರಾಜು ಮತ್ತು ರೋಜಮ್ಮ ನಿರ್ಮಿಸುತ್ತಿರುವ 'ನಾರಿ' ಚಿತ್ರದ ಮುಹೂರ್ತ ಸಮಾರಂಭ ಸೋಮವಾರ ಶ್ರೀ ಬಂಡೆ ಮಹಾಂಕಾಳಿ ದೇವಸ್ಥಾನದಲ್ಲಿ ವಿದ್ಯುಕ್ತವಾಗಿ ನೆರವೇರಿತು. ಈ ಚಿತ್ರದ ಮೂಲಕ ರವಿ ಕಲ್ಯಾಣ್ ನಾಯಕನಾಗಿ ಪದಾರ್ಪಣೆ ಮಾಡುತ್ತಿದ್ದು, ಕುಬೇರ್ ಕೆ. ಇಂಪೂ ಕಥೆ–ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಸುಮಾರು 10 ಚಿತ್ರಗಳಲ್ಲಿ ಖಳನಾಯಕನಾಗಿ ಅಭಿನಯಿಸಿರುವ ರವಿ ಕಲ್ಯಾಣ್, ಈ ಚಿತ್ರದ ಮೂಲಕ ಹೀರೋ ಆಗಿದ್ದಾರೆ. ಅವರ ತಂದೆ–ತಾಯಿ ಈ ಚಿತ್ರದ ನಿರ್ಮಾಪಕರು. ಚಿತ್ರದ ಕುರಿತು ಮಾತನಾಡುವ ಅವರು, 'ನಾಯಕನಾಗಿ ಇದು ನನ್ನ ಮೊದಲ ಚಿತ್ರ. ಇದಕ್ಕೂ ಮೊದಲು ಸುಮಾರು 10 ಚಿತ್ರಗಳಲ್ಲಿ ಖಳನಾಯಕನಾಗಿ ಅಭಿನಯಿಸಿದ್ದೇನೆ. ದರ್ಶನ್, ಚಿರಂಜೀವಿ ಸರ್ಜಾ, 'ಸಂಚಾರಿ' ವಿಜಯ್ ಮುಂತಾದವರ ಚಿತ್ರಗಳಲ್ಲಿ ನಟಿಸಿದ್ದೇನೆ. ಇದೊಂದು ಒಳ್ಳೆಯ ಕಥೆ.



## 'ನಾಗಬಂಧಂ'ನಿಂದ ನಭಾ ನಟೇಶ್ ಭರ್ಜರಿ ಕಮ್‌ಬ್ಯಾಕ್

ಕನ್ನಡತಿ, ಪಟಾಕಿ ಪೋರಿ ನಭಾ ನಟೇಶ್ ಸದ್ಯ ಟಾಲಿವುಡ್ ಮತ್ತು ಬಾಲಿವುಡ್ ಅಂಗಳದಲ್ಲಿ ಭರ್ಜರಿ ಸೌಂಡು ಮಾಡುತ್ತಿದ್ದಾರೆ. ಇತ್ತೀಚೆಗಷ್ಟೇ ತೆರೆಕಂಡ ಅವರ ಬಹು ನಿರೀಕ್ಷಿತ ಪ್ಯಾನ್ ಇಂಡಿಯಾ ಸಿನಿಮಾ 'ನಾಗಬಂಧಂ' ಚಿತ್ರಮಂದಿರಗಳಲ್ಲಿ ಧೂಳೆಬ್ಬಿಸುತ್ತಿದ್ದು, ನಭಾ ಅವರ ಅಭಿ ನಯ ಮತ್ತು ನೃತ್ಯಕ್ಕೆ ಪ್ರೇಕ್ಷಕರಿಂದ ಭಾರಿ ಮೆಚ್ಚುಗೆ ಹಾಗೂ ಭರ್ಜರಿ ರೆಸ್ಪಾನ್ಸ್ ಸಿಗುತ್ತಿದೆ. ಮೇಲ್ನೋಟಕ್ಕೆ ಇದೊಂದು ಸಂಪೂರ್ಣ ಆಧ್ಯಾತ್ಮಿಕ ಹಿನ್ನೆಲೆಯ ಸಿನಿಮಾ ಎಂದು ಅನಿಸಿದರೂ, ಕಮರ್ಷಿಯಲ್ ಪ್ರೇಕ್ಷಕರಿಗೆ ಬೇಕಾದ ಎಲ್ಲಾ ಮನರಂಜನಾತ್ಮಕ ಅಂಶಗಳೂ ಈ ಚಿತ್ರದಲ್ಲಿವೆ. ಬ್ರೇಕ್‌ನ ನಂತರ ಕಮ್‌ಬ್ಯಾಕ್ ಮಾಡಿದ ನಟಿ ವರ್ಷಗಳ ಹಿಂದೆ ನಭಾ ನಟೇಶ್ ಅವರಿಗೆ ಭೀಕರ ರಸ್ತೆ ಅಪಘಾತವೊಂದು ಸಂಭವಿಸಿತ್ತು. ಈ ದುರ್ಘಟನೆಯಲ್ಲಿ ಅವರ ಎಡ ಭುಜದ ಮೂಳೆ ಮುರಿದು ಗಂಭೀರವಾದ ಪೆಟ್ಟಾಗಿತ್ತು. ಇದಕ್ಕಾಗಿ ಅವರು ಪದೇ ಪದೇ ಸರಣಿ ಶಸ್ತ್ರಚಿಕಿತ್ಸೆಗಳಿಗೂ ಒಳಗಾಗಬೇಕಾಯಿತು.



## ಸಂಗೀತ ಪ್ರಪಂಚದಲ್ಲಿ ವಿಜಯ್ ಪ್ರಕಾಶ್ ಹೊಸ ಹೆಜ್ಜೆ

ಸಿನಿಮಾ, ಶಾಸ್ತ್ರೀಯ ಸಂಗೀತ ಸೇರಿದಂತೆ ಹಲವು ಪ್ರಕಾರಗಳಲ್ಲಿ ತಮ್ಮದೇ ಛಾಪು ಮೂಡಿಸಿರುವ ಅಂತಾರಾಷ್ಟ್ರೀಯ ಖ್ಯಾತಿಯ ಗಾಯಕ ಹಾಗೂ ಹೆಮ್ಮೆಯ ಕನ್ನಡಿಗ ವಿಜಯ್ ಪ್ರಕಾಶ್ ಹೊಸ ಹೆಜ್ಜೆ ಇಟ್ಟಿದ್ದಾರೆ. ಇಷ್ಟು ವರ್ಷಗಳ ತಮ್ಮ ಅನುಭವ, ಶ್ರಮ ಮತ್ತು ಹಣವನ್ನು ಧಾರೆ ಎರೆದು ವಿಜಯ್ ಪ್ರಕಾಶ್ ಕಲ್ಚರಲ್‌ಕ್ಲಬ್, ದ್ವಾರ್ ಸ್ಟುಡಿಯೋಸ್ ಮತ್ತು ದ್ವಾರ್ ಮ್ಯೂಸಿಕ್ ಎಂಬ ಹೊಸ ಸಂಸ್ಥೆಗಳನ್ನು ಪ್ರಾರಂಭಿಸಿದ್ದಾರೆ. ಕೆರೆಯ ನೀರನ್ನು ಕೆರೆಗೆ ಚೆಲ್ಲಿ ಎನ್ನುವಂತೆ, ಸಂಗೀತದಲ್ಲಿ ಪಡೆದಿದನ್ನು ಸಂಗೀತಕ್ಕೇ ಕೊಡುತ್ತಿದ್ದಾರೆ. ಬೆಂಗಳೂರಿನ ಹೊಸಕೆರೆಹಳ್ಳಿಯಲ್ಲಿರುವ ಸಪ್ತಗಿರಿ ಲೇಔಟ್‌ನಲ್ಲಿ ವಿಜಯ್ ಪ್ರಕಾಶ್ ಕಲ್ಚರಲ್ ಕ್ಲಬ್ ಮತ್ತು ದ್ವಾರ್ ಸ್ಟುಡಿಯೋಸ್ ನಿರ್ಮಾಣವಾಗಿದ್ದು, ತಮ್ಮ ಮೂರು ಹೊಸ ಸಾಹಸಗಳ ಕುರಿತು ವಿವರಣೆ ನೀಡಲು ವಿಜಯ್‌ಪ್ರಕಾಶ್ ಮತ್ತು ಅವರ ಪತ್ನಿ ಮಹತಿ ವಿಜಯ್ ಪ್ರಕಾಶ್ ಮಾಧ್ಯಮ ದವರನ್ನು ಆಹ್ವಾನಿಸಿದ್ದರು. ಈ ಕುರಿತು ಮಾತನಾಡಿದ ವಿಜಯ್ ಪ್ರಕಾಶ್, 'ಇಡೀ ಭಾರತದಲ್ಲೇ ಒಂದು ಬೃಹತ್ ಸಂಗೀತ ಶಾಲೆಯೊಂದನ್ನು ಪ್ರಾರಂಭಿಸಬೇಕು ಎಂಬ ಆಸೆ ಇತ್ತು.



## ಶ್ರೀಮುರಳಿ ಪರಾಕ್ ಮಾಸ್ ಟೀಸರ್ ಅನಾವರಣ

ರೋರಿಂಗ್ ಸ್ಟಾರ್ ಶ್ರೀಮುರಳಿ ಭತ್ತಳಿಕೆಯಿಂದ ಬರ್ತಿರುವ ಬಹು ನಿರೀಕ್ಷಿತ ಸಿನಿಮಾಗಳಲ್ಲೊಂದು ಪರಾಕ್. ಸಿನಿಮೋತ್ಸವ ಇರುವ ಹೊಸ ತಂಡ ಸೇರಿಕೊಂಡು ಮಾಡುತ್ತಿರುವ ಈ ಚಿತ್ರದ ಮೇಲೆ ನಿರೀಕ್ಷೆ ಹೆಚ್ಚಿದೆ. ಆ ನಿರೀಕ್ಷೆಗೆ ತಕ್ಕಂತೆ ಚಿತ್ರತಂಡ ಟೀಸರ್ ಬಿಡುಗಡೆ ಮಾಡಿದೆ. ಇಂದು ಬೆಂಗಳೂರಿನ ಖಾಸಗಿ ಮಾಲ್‌ನಲ್ಲಿ ಟೀಸರ್ ರಿಲೀಸ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ನಿರ್ದೇಶಕ ಹಾಲೇಶ್ ಕೊಗುಂಡಿ ಮಾತನಾಡಿ, ಇದು ಜಸ್ಟ್ ಟೀಸರ್ ಅಷ್ಟೇ. ಸಿನಿಮಾದಲ್ಲಿ ಸಾಕಷ್ಟು ವಿಷಯಗಳನ್ನು ಹೇಳಿದ್ದೇವೆ. ಶ್ರೀಮುರಳಿ ಸರ್ ಜೊತೆ ಕೆಲಸ ಮಾಡಿದ್ದು ಖುಷಿ ಕೊಟ್ಟಿದೆ. ನಿಮ್ಮ ಬೆಂಬಲ ಇರಲಿ ಎಂದರು. ನಟ ಶ್ರೀಮುರಳಿ ಮಾತನಾಡಿ, ಪರಾಕ್ ಟೀಸರ್ ನೋಡಿದ್ರೆ ಇದು ಸುಲಭವಾಗಿ ಆದ ಕೆಲಸ ಅಲ್ಲ. ಅದಕ್ಕೆ ಆದ ಶ್ರಮ. ಸಾಕಷ್ಟು ಮೀಟಿಂಗ್ ಆಯ್ತು. ಇದನ್ನು ತೆಗೆಯಲು ಎರಡೂವರೆ ವರ್ಷ ತೆಗೆದುಕೊಂಡೆವು. ಪರಾಕ್ ಸುಲಭವಾಗಿ ಶುರುವಾದ ಸಿನಿಮಾವಲ್ಲ.



## ಪ್ಯಾನ್ ಇಂಡಿಯಾ 'ಪ್ಯಾರಾಡಾಕ್ಸ್' ಚಿತ್ರಕ್ಕೆ ಮುಹೂರ್ತ

ನೃತ್ಯ ನಿರ್ದೇಶಕರಾಗಿ ಹೆಸರು ಮಾಡಿರುವ ಕ್ಯಾಪ್ಟನ್ ಕಿಶೋರ್ ಈಗ ಮೊದಲ ಸಿನಿಮಾ ನಿರ್ದೇಶನ ಮಾಡುತ್ತಿದ್ದಾರೆ. ಹೌದು, ಅವರು 'ಪ್ಯಾರಾಡಾಕ್ಸ್' ಎಂಬ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಇದೊಂದು ಪ್ಯಾನ್ ಇಂಡಿಯಾ ಮಟ್ಟದಲ್ಲಿ ತಯಾರಾಗುತ್ತಿರುವ ಚಿತ್ರವಾಗಿದ್ದು, ಪ್ರಮುಖ ಪಾತ್ರದಲ್ಲಿ ಬಹುಭಾಷಾ ನಟಿ ಹನ್ಸಿಕಾ ಮೊಟ್ವಾನಿ ಅಭಿನಯ ಮಾಡುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಮುಹೂರ್ತ ಸಮಾರಂಭ ಬೆಂಗಳೂರಿನ ಮುದ್ದಿನಪಾಳ್ಯದ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ನಡೆಯಿತು. ಮುಹೂರ್ತದ ನಂತರ ನಡೆದ ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ಬಗ್ಗೆ ಮಾಹಿತಿ ನೀಡಿದ ನಿರ್ದೇಶಕ ಕ್ಯಾಪ್ಟನ್ ಕಿಶೋರ್, 'ಇದು ಪ್ಯಾನ್ ಇಂಡಿಯಾ ಸಿನಿಮಾ. ಅಂಗಾಂಗ ಕಳ್ಳತನ (ಆರ್ಗನ್ ಸ್ಕ್ಯಾಮ್) ಬಗ್ಗೆ ಸಿನಿಮಾ ಇರಲಿದ್ದು, ಮಹಿಳಾ ಪ್ರಧಾನ ಕಥೆ ಒಳಗೊಂಡಿದೆ.






## ರುಕ್ಮಿಣಿ ರಾಧಾಕೃಷ್ಣ 2 ಹಾಡುಗಳ ಬಿಡುಗಡೆ..



ಉಮೇಶ್ ಫಿಲಂಸ್ ಲಾಂಛನದಲ್ಲಿ ಎನ್. ಹನುಮಂತರಾಜು, ಎನ್.ಹೆಚ್.ಉಮೇಶ್ ನಿರ್ಮಿಸುತ್ತಿರುವ' ರುಕ್ಮಿಣಿ ರಾಧಾಕೃಷ್ಣ ' ಚಿತ್ರಕ್ಕೆ ಪ್ರಾಣ್ ಸುವರ್ಣ ಆಕ್ಷನ್ ಕಟ್ ಹೇಳಿದ್ದಾರೆ. ಸುನಾದ್ ಗೌತಂ ಅವರ ಸಂಗೀತ ನಿರ್ದೇಶನವಿರುವ 2 ಹಾಡುಗಳ ಬಿಡುಗಡೆ ಸಮಾರಂಭ ನಡೆಯಿತು. ಶಿಲ್ಪಾ ಶ್ರೀನಿವಾಸ್ ಪುತ್ರ ಭರತ್ ಕುಮಾರ್, ಪಾರು ಖ್ಯಾತಿಯ ಮೋಕ್ಷಿತಾ ಪೈ, ರಿಯಾ ಸಚ್‌ದೇವ್ ಈ ಚಿತ್ರದ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಆಡಿಯೋ ರಿಲೀಸ್ ಮಾಡಿದ ಲಹರಿ ವೇಲು ಮಾತನಾಡುತ್ತ ಈ ಚಿತ್ರದಲ್ಲಿ 5 ಸುಂದರ ಹಾಡುಗಳಿದ್ದು, ಅವುಗಳನ್ನು ಅಷ್ಟೇ ಅದ್ಭುತವಾಗಿ ಪಿಚ್ಚರೈಜೇಳನ್ ಮಾಡಿದ್ದಾರೆ. ನಾನು ಕೂಡ ಬಹಳ ನಿರೀಕ್ಷೆ ಇಟ್ಟುಕೊಂಡಿದ್ದೇನೆ ಎಂದರು. ಸಾಹಿತಿ ಕೆ. ಕಲ್ಯಾಣ್ ಮಾತನಾಡಿ ನಿರ್ಮಾಪಕರಲ್ಲಿರುವ ಸಿದ್ದತೆ, ನಿರ್ದೇಶಕರಲ್ಲಿರುವ ಬದ್ದತೆ ಹಾಡುಗಳಲ್ಲಿ ಎದ್ದು ಕಾಣುತ್ತದೆ ಎಂದರು.

## ಎಜೆ ಶೆಟ್ಟಿ ನಿರ್ದೇಶನದಲ್ಲಿ 'ಭೂರಮೆ'?



ಕಿಸ್, ಕಬ್ಜ ಹಾಗೂ ಬಘೀರ ಸಿನಿಮಾಗಳಿಗೆ ಕ್ಯಾಮೆರಾ ಹಿಡಿದಿರುವ ಎಜೆ ಶೆಟ್ಟಿ ಭೂರಮೆ ಎಂಬ ಚೆಂದದ ಹಾಡಿನ ಮೂಲಕ ಪ್ರೇಕ್ಷಕರ ಎದುರು ಬಂದಿದ್ದಾರೆ. ಎಜೆ ಶೆಟ್ಟಿ ನಿರ್ದೇಶಿಸಿರುವ ಚೊಚ್ಚಲ ಆಲ್ಬಂ ಸಾಂಗ್ ಭೂರಮೆ. ಯುವ ಪ್ರತಿಭೆಗಳಾದ ಅರ್ಥವ ವಿಶ್ವನಾಥ್ ಹಾಗೂ ಸುಷ್ಮಿತಾ ಶೆಟ್ಟಿ ನಟನೆಯ ಸಾಂಗ್ ಬಿಡುಗಡೆ ಕಾರ್ಯಕ್ರಮ ಜರುಗಿತು. ಸ್ಯಾಂಡಲ್‌ವುಡ್ ಸ್ಟಾರ್ ಡೈರೆಕ್ಟರ್ಸ್‌ಗಳಾದ ಎಪಿ ಅರ್ಜುನ್, ಚೇತನ್ ಕುಮಾರ್ ಹಾಗೂ ಪವನ್ ಒಡೆಯರ್ ಅಥಿತಿಗಳಾಗಿ ಆಗಮಿಸಿ ಹೊಸಬರಿಗೆ ಸಾಥ್ ಕೊಟ್ಟರು. ಭೂರಮೆ ಚೆನ್ನಾಗಿ ಮೂಡಿ ಬರಲು ನನ್ನ ಸ್ನೇಹಿತರು ಕಾರಣ. ನಾನು ಈ ಹೆಜ್ಜೆ ಇಟ್ಟಾಗ ನನ್ನ ತಂದೆ ತಾಯಿ ಜೊತೆಯಾಗಿ ನಿಂತರು. ಸಿನಿಮಾ ಮಾಡಲು ಹೊರಟಿರುವ ನಾವು ತೆಗೆದುಕೊಂಡು ಮೊದಲ ಹೆಜ್ಜೆ ಇದು. ಎಂದರು.

## ಡಿ. 3ರಂದು ಪ್ರಭಾಸ್ ಅಭಿನಯದ 'ಫೌಜಿ'

ಭಾರತೀಯ ಚಿತ್ರರಂಗದ ಸ್ಟಾರ್‌ನಟ ಪ್ರಭಾಸ್ ಅಭಿನಯದ, ನಿರ್ದೇಶಕ ಹನು ರಾಘವಪುಡಿ ಅವರ ಮಹತ್ವಾಕಾಂಕ್ಷೆಯ ಚಿತ್ರ 'ಫೌಜಿ'ಯ ಬಿಡುಗಡೆ ದಿನಾಂಕ ಅಧಿಕೃತವಾಗಿ ಘೋಷಣೆಯಾಗಿದೆ. ಚಿತ್ರತಂಡವು ಆಕರ್ಷಕ ಪೋಸ್ಟರನ್ನು ಬಿಡುಗಡೆ ಮಾಡುವ ಮೂಲಕ, ಈ ಚಿತ್ರವು ಇದೇ ವರ್ಷದ ಡಿಸೆಂಬರ್ 3ರಂದು ಪ್ರಪಂಚದಾದ್ಯಂತ ಅದ್ದೂರಿಯಾಗಿ ತೆರೆ ಕಾಣಲಿದೆ ಎಂದು ಖಚಿತಪಡಿಸಿದೆ. 'ಅಜ್ಞಾತ ಪರ್ವ ಎಂಡ್ಸ್' ಎಂಬ ಕುತೂಹಲಕಾರಿ ಘೋಷಣೆಯೊಂದಿಗೆ, ಚಿತ್ರದ ನಿರ್ಮಾಪಕರು 'ದಿ ರೆಬೆಲಿಯನ್ ಬಿಗಿನ್ಸ್' ಎಂದು ಸಾರಿದ್ದಾರೆ. ಈ ಘೋಷಣೆಯು ಪ್ರೇಕ್ಷಕರಲ್ಲಿ ಚಿತ್ರದ ಮೇಲಿನ ನಿರೀಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ. ಪ್ರಭಾಸ್ ಅವರು ತಮ್ಮ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿರುವ ಪೋಸ್ಟರ್, ಚಿತ್ರದ ತೀವ್ರತೆಯನ್ನು ಎತ್ತಿ ತೋರಿಸುತ್ತದೆ. ರಕ್ತಸಿಕ್ತವಾದ ಉಡುಪಿನಲ್ಲಿ, ಸುತ್ತಲೂ ಶವಗಳ ನಡುವೆ ಕಲ್ಲಿನ ಮೇಲೆ ಕುಳಿತು ಗನ್ ಹಿಡಿದು ಪ್ರಭಾಸ್ ಕುಳಿತಿದ್ದಾರೆ.



## ಉಜ್ಜನಿ 'ಊರಬ್ಬ' ಯಶಸ್ವಿಯಾಗಿ ಸಾಗುತ್ತಿದೆ..

ಊರಬ್ಬ ಚಿತ್ರ ಅತ್ಯಂತ ಯಶಸ್ವಿಯಾಗಿ 50ನೇ ದಿನದತ್ತ ಮುನ್ನುಗ್ಗುತ್ತಿದೆ. ಎಲ್ಲಾ ವರ್ಗದ ಚಿತ್ರಪ್ರೇಮಿಗಳಿಂದ ಚಿತ್ರಕ್ಕೆ ಅಭೂತಪೂರ್ವ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ಚಿತ್ರಮಂದಿರಗಳಲ್ಲಿ ಪ್ರದರ್ಶನ ಕಾಣುತ್ತಾ ಯಶಸ್ಸಿನ ಹೆಜ್ಜೆಯನ್ನಿಟ್ಟಿದೆ. ತುಮಕೂರು ಜಿಲ್ಲೆಯ ಕುಣಿಗಲ್ ತಾಲೂಕಿನ ಐತಿಹಾಸಿಕ ಪುಣ್ಯಕ್ಷೇತ್ರ 'ಉಜ್ಜನಿ' ಗ್ರಾಮದಲ್ಲಿ 800 ವರ್ಷಗಳ ಇತಿಹಾಸ ಇರುವ ಶ್ರದ್ಧಾ–ಭಕ್ತಿಯಿಂದ ಆಚರಿಸಲಾಗುವ ಶ್ರೀ ಚೌಡೇಶ್ವರಿ ದೇವಿಯ ಗ್ರಾಮೋತ್ಸವದ ಜಾತ್ರೆ ಹಿನ್ನೆಲೆಯನ್ನು ಒಳಗೊಂಡ ವಿಭಿನ್ನ ಕಥಾಹಂದರ ಈ ಚಿತ್ರದಲ್ಲಿದೆ. ಭಕ್ತಿ ಮತ್ತು ರೋಚಕತೆಯನ್ನು ಹದವಾಗಿ ಬೆರೆಸಿ ನಿರ್ದೇಶಕರು ಕಥೆಯನ್ನು ತೆರೆಯ ಮೇಲೆ ತಂದಿದ್ದಾರೆ. ಹಳ್ಳಿಯ ಸೊಗಡು, ಆಚರಣೆಗಳು, ಸಾಂಸ್ಕೃತಿಕ ಆಯಾಮಗಳನ್ನು ಅತ್ಯಂತ ಆಕರ್ಷಕವಾಗಿ ಚಿತ್ರೀಕರಿಸಲಾಗಿದೆ. ಚಿತ್ರರಂಗದ ಹಿರಿಯ ಗಣ್ಯರು, ಜನಪದ ತಜ್ಞರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.









KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021